ಸಂಪುಟ : 9 ಸಂಚಿಕೆ 69 ಪುಟ : 4 ಬೆಲೆ: 3.00 ಮಂಗಳವಾರ ಏಪ್ರಿಲ್ 16 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ...

VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 69 Pages : 4 Price : 3.00 Tuesday April 16 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

ಲೋಕಸಭಾ ಚುನಾವಣೆ –2024

## ಮತದಾನ ಜಾಗೃತಿಗಾಗಿ ಸೈಕ್ಲಿಂಗ್ ಜಾಥಾ, ಮಾನವ ಸರಪಳಿ ಆಯೋಜನೆ

■ವಿಜಯಸಾಕ್ಷಿ ಸುದ್ದಿ, ಗದಗ

ಲೋಕಸಭಾ ಚುನಾವಣೆ– 2024 ರ ಸಂಬಂಧ ಗದಗ ಜಿಲ್ಲೆಯ ವ್ಯಾಪ್ತಿಯಲ್ಲಿ ಮೇ 7ರಂದು ಮತದಾನ ಜರುಗಲಿದೆ. ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಮತದಾನ ಮಾಡುವಂತೆ ಪ್ರೇರೇಪಿಸುವ ಉದ್ದೇಶದಿಂದ ಜಿ.ಪಂ. ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು ಹಾಗೂ ಜಿಲ್ಲಾ ಸ್ವೀಪ್ ಸಮಿತಿ ಅಧ್ಯಕ್ಷರ ನಿರ್ದೇಶನದಂತೆ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯಿಂದ ಸ್ವೀಪ್ ಕಾರ್ಯಕ್ರಮವಾಗಿ ಎಪ್ರಿಲ್ 16 ರಂದು ಬೆಳಿಗ್ಗೆ 7 ಗಂಟೆಗೆ ಗದಗ ಶಹರದಲ್ಲಿ ಸೈಕ್ಲಿಂಗ್ ಜಾಥಾ ಹಾಗೂ ಎಪ್ರಿಲ್ 19 ರಂದು ಬೆಳಿಗ್ಗೆ 7 ಗಂಟೆಗೆ ಗದಗ ಶಹರದ ಕೆ.ಎಚ್.ಪಾಟೀಲ ಜಿಲ್ಲಾ ಕ್ರೀಡಾಂಗಣ ಆವರಣದಲ್ಲಿ ಮಾನವ ಸರಪಳಿ ಕಾರ್ಯಕ್ರಮ ಆಯೋಜಿಸಲಾಗಿದೆ.

ಈ ಸೈಕ್ಲಿಂಗ್ ಜಾಥಾ ಹಾಗೂ ಮಾನವ ಸರಪಳಿ ಕಾರ್ಯಕ್ರಮದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಸಾರ್ವಜನಿಕರು, ವಿವಿಧ ಸಂಘ ಸಂಸ್ಥೆಗಳು ಭಾಗವಹಿಸಿ ಯಶಸ್ವಿಗೊಳಿಸಲು ಪ್ರಕಟಣೆ ತಿಳಿಸಿದೆ.

ಸೈಕ್ಲಿಂಗ್ ಜಾಥಾ ಹೊರಡುವ ಮಾರ್ಗ :ಜಾಥಾವು ನಗರದ ಕೆ.ಎಚ್.ಪಾಟೀಲ ಜಿಲ್ಲಾ ಕ್ರೀಡಾಂಗಣದಿಂದ ಪ್ರಾರಂಭಗೊಂಡು ಪಂಚಾಕ್ಷರಿ ನಗರದ ಶುದ್ಧ ಕುಡಿಯುವ ನೀರಿನ ಘಟಕ, ಚೇತನ ಕ್ಯಾಂಟೀನ್, ಹಾತಲಗೇರಿ ನಾಕಾ, ಬಳ್ಳಾರಿ ಗೇಟ್, ಕುರಹಟ್ಟಿ ಪೇಟೆ ಟೆಂಗಿನಕಾಯಿ ಬಜಾರ– ಜರ್ಮನ್ ಆಸ್ಪತ್ರೆ, ಸಹಸ್ರಾರ್ಜುನ ಸರ್ಕಲ್, ಮಹಾರಾಣ ಪ್ರತಾಪ ಸಿಂಹ ಸರ್ಕಲ್ –ಹಳೇ ಕೋರ್ಟ್ ಸರ್ಕಲ್, ಗಾಂಧಿ ಸರ್ಕಲ್, ರೋಟರಿ ಸರ್ಕಲ್, ಭೂಮರಡ್ಡಿ ಸರ್ಕಲ್ ಮೂಲಕ ಕೆ.ಎಚ್.ಪಾಟೀಲ ಜಿಲ್ಲಾ ಕ್ರೀಡಾಂಗಣಕ್ಕೆ ಬಂದು ತಲುಪಲಿದೆ.

## ಕಾಲರಾ ರೋಗ ಹರಡದಂತೆ ಮುಂಜಾಗ್ರತಾ ಕ್ರಮ ಕೈಗೊಳ್ಳಲು ಡಿಸಿ ಸೂಚನೆ



■ವಿಜಯಸಾಕ್ಷಿ ಸುದ್ದಿ, ಗದಗ

ಕಾಲರಾ ಪ್ರಕರಣಗಳು ವರದಿಯಾಗುತ್ತಿರುವ ಹಿನ್ನೆಲೆ ಅಗತ್ಯ ಮುನ್ನೆಚ್ಚರ ವಹಿಸುವಂತೆ ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್. ಅವರು ತಿಳಿಸಿದ್ದಾರೆ.

ಕಾಲರವು ವಿಬ್ರಿಯೋ ಕಾಲರಾ ಎಂಬ ಬ್ಯಾಕ್ಟೀರಿಯಾದಿಂದ ಹರಡುವ ಕಾಯಿಲೆಯಾಗಿದ್ದು, ಈ ಬ್ಯಾಕ್ಟೀರಿಯಾ ಮನುಷ್ಯರ ದೇಹದಲ್ಲಿ ಕಲುಷಿತ ನೀರನ್ನು ಕುಡಿಯುವುದರಿಂದ ಮತ್ತು ಕಲುಷಿತ ಆಹಾರ ಸೇವಿಸುವುದರ ಮುಖಾಂತರ ಪ್ರಸರಣವಾಗುತ್ತದೆ.

ಇದರಿಂದ ಅತಿಸಾರ, ವಾಕರಿಕೆ, ವಾಂತಿ, ನಿರ್ಜಲೀಕರಣ ಮತ್ತು ಸ್ನಾಯು ಸೆಳೆತದಂತಹ ಸಮಸ್ಯೆಗಳು ಉದ್ಭವಿಸುತ್ತವೆ. ಸಾರ್ವಜನಿಕರು ಕಾಲರಾ ರೋಗ ಹರಡದಂತೆ ಅಗತ್ಯ ಮುನ್ನೆಚ್ಚರಿಕೆ ಕ್ರಮಗಳನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ಜಿಲ್ಲಾಧಿಕಾರಿಯವರು ಕೋರಿದ್ದಾರೆ.

ಕುದಿಸಿ, ಆರಿಸಿದ ನೀರನ್ನು ಕುಡಿಯುವುದು. ಸಾರ್ವಜನಿಕರು ನೀರಿನ ಕೊಳಾಯಿ ಮತ್ತು ಸ್ಥಳವನ್ನು ಸ್ವಚ್ಛವಾಗಿ ಇಡುವುದು. ತಾಜಾ ಹಣ್ಣುಗಳು, ತರಕಾರಿಗಳನ್ನು ಮತ್ತು ಆಹಾರ ಪದಾರ್ಥಗಳನ್ನೇ ಉಪಯೋಗಿಸುವುದು. ಊಟ ತಯಾರಿಸುವ ಮತ್ತು ಊಟ ಮಾಡುವ ಮುನ್ನ ಕೈಗಳನ್ನು ಸಾಬೂನು ಮತ್ತು ನೀರಿನಿಂದ ಸ್ವಚ್ಛಗೊಳಿಸುವುದು. ಶೌಚಾಲಯವನ್ನು ಉಪಯೋಗಿಸುವ ಮುಂಚೆ ಮತ್ತು ನಂತರ ಕೈಗಳನ್ನು ಸಾಬೂನಿನಿಂದ ಸ್ವಚ್ಛಗೊಳಿಸುವುದು.

ಸಾರ್ವಜನಿಕ ಸ್ಥಳಗಳಲ್ಲಿ ಸಿದ್ಧಪಡಿಸಿದ ಆಹಾರ ಪದಾರ್ಥಗಳ ಮೇಲೆ ಕ್ರಿಮಿ ಕೀಟಗಳು ಕುಳಿತುಕೊಳ್ಳದಂತೆ ಸದಾ ಮುಚ್ಚಳದಿಂದ ಮುಚ್ಚಿಡುವಂತೆ ವ್ಯಾಪಾರಸ್ಥರಿಗೆ ತಿಳಿಸಿ ಹೇಳುವುದು. 15 ದಿನಕ್ಕೊಮ್ಮೆ ಸಾರ್ವಜನಿಕರಿಗೆ ಸರಬರಾಜು ಮಾಡುವ ಕುಡಿಯುವ ನೀರನ್ನು ಪರೀಕ್ಷಿಸುವುದು ಮತ್ತು ಅದರ ಶುದ್ಧತೆಗಾಗಿ ಕೂಡಲೇ ಅಗತ್ಯ ಕ್ರಮ ವಹಿಸುವಂತೆ ಜಿಲ್ಲಾಧಿಕಾರಿ ಅವರು ಹೇಳಿದ್ದಾರೆ.

ಪತ್ರಿಕಾಗೋಷ್ಠಿಯಲ್ಲಿ ಪ್ರಧಾನಿ ಮೋದಿ ವಿರುದ್ಧ ಸಚಿವ ಎಚ್.ಕೆ. ಪಾಟೀಲ ಆರೋಪ

# ರಾಜ್ಯದ ಪ್ರವಾಸೋದ್ಯಮ ಅಭಿವೃದ್ಧಿಯಲ್ಲಿ ನಿರ್ಲಕ್ಷ್ಯ

■ವಿಜಯಸಾಕ್ಷಿ ಸುದ್ದಿ, ಗದಗ

ಪ್ರಧಾನಿ ನರೇಂದ್ರ ಮೋದಿ ಕಳೆದ 10 ವರ್ಷಗಳಲ್ಲಿ ಕರ್ನಾಟಕ ಪ್ರವಾಸೋದ್ಯಮ ಅಭಿವೃದ್ಧಿಗೆ ಸಂಬಂಧಿಸಿದ 9 ಯೋಜನೆಗಳ ಪೈಕಿ 8 ಯೋಜನೆಗಳಿಗೆ ಅನುದಾನ ನೀಡದೆ ಕರ್ನಾಟಕ ಪ್ರವಾಸೋದ್ಯಮ ಕ್ಷೇತ್ರದಕ್ಕೆ ಬಹುದೊಡ್ಡ ದ್ರೋಹ ಮಾಡಿದ್ದಾರೆ ಎಂದು ಕಾನೂನು ಹಾಗೂ ಪ್ರವಾಸೋದ್ಯಮ ಇಲಾಖೆ ಸಚಿವ ಎಚ್.ಕೆ. ಪಾಟೀಲ ಆರೋಪಿಸಿದರು.




ನಗರದ ಪತ್ರಿಕಾ ಭವನದಲ್ಲಿ ಸೋಮವಾರ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಸಚಿವರು, ಪ್ರಧಾನಿ ಮೋದಿ ಚುನಾವಣೆ ಪ್ರಚಾರಕ್ಕೆ ಬಂದ ಸಂದರ್ಭದಲ್ಲಿ ಮೈಸೂರು, ಬಾದಾಮಿ ಹಾಗೂ ಹಂಪಿ ಕ್ಷೇತ್ರಗಳನ್ನು ಜಾಗತಿಕ ಪ್ರವಾಸಿ ತಾಣವಾಗಿಸುವದಾಗಿ ಹೇಳಿಕೆ ನೀಡಿದ್ದಾರೆ. ಆದರೆ ಈಗಾಗಲೇ ಅವು ವಿಶ್ವ ಪಾರಂಪರಿಕ ತಾಣಗಳ ಪಟ್ಟಿಯಲ್ಲಿ ಸ್ಥಾನ ಪಡೆದಿವೆ. ಅವುಗಳ ಅಭಿವೃದ್ಧಿಗೆ ಇನ್ನಷ್ಟು ಒತ್ತು ಸಿಗಬೇಕಾಗಿರುವುದು ನಿಜವಾದರೂ, 10 ವರ್ಷಗಳಲ್ಲಿ ಕರ್ನಾಟಕ ಪ್ರವಾಸೋದ್ಯಮ ಅಭಿವೃದ್ಧಿಯನ್ನು ನಿರ್ಲಕ್ಷಿಸಿ, ಈಗ ಅದರ ಅಭಿವೃದ್ಧಿ ಬಗ್ಗೆ ಮಾತಾಡುವುದು ಯಾವ ನ್ಯಾಯ ಎಂದು ಪ್ರಶ್ನಿಸಿದರು.

### ಎಚ್‌ಡಿಕೆ ಮಹಿಳೆಯರ ಕ್ಷಮೆ ಕೇಳಲಿ

ಮಾಜಿ ಮುಖ್ಯಮಂತ್ರಿ ಎಚ್.ಡಿ. ಕುಮಾರಸ್ವಾಮಿ ಮಹಿಳೆಯರ ಬಗ್ಗೆ ಅಪಹಾಸ್ಯ, ಅಗೌರವ ತರುವಂಥ ಹೇಳಿಕೆ ನೀಡಿರುವುದು ಅವಮಾನಕರ ಸಂಗತಿ. 3 ಕೋಟಿ ಮಹಿಳೆಯರು ಗ್ಯಾರಂಟಿ ಯೋಜನೆಗಳ ಲಾಭ ಪಡೆದಿದ್ದಾರೆ. ಸ್ವಾವಲಂಬಿ, ಸ್ವಾಭಿಮಾನದ ಬದುಕು ಕಂಡುಕೊಂಡಿದ್ದಾರೆ. ಅಂಥವರಿಗೆ ಮುಖಂಡರೊಬ್ಬರು ಅಗೌರವ ಉಂಟು ಮಾಡಿರುವುದು ಸರಿಯಲ್ಲ. ಈ ಕೂಡಲೇ ಕುಮಾರಸ್ವಾಮಿ ಅವರು ರಾಜ್ಯದ ಮಹಿಳೆಯರ ಕ್ಷಮೆ ಕೇಳಬೇಕು. ಇಲ್ಲದಿದ್ದರೆ ರಾಜಕೀಯವಾಗಿ ಅಂತ್ಯ ಕಾಣಬೇಕಾಗುತ್ತದೆ.

– ಎಚ್.ಕೆ. ಪಾಟೀಲ.
ಕಾನೂನು, ಪ್ರವಾಸೋದ್ಯಮ ಸಚಿವರು.

ಸಂವಿಧಾನವನ್ನು ಬದಲಾಯಿಸುತ್ತೇವೆ ಎಂದು ಬಿಜೆಪಿ ಸಂಸದರು ಬಹಿರಂಗವಾಗಿ ಹೇಳಿಕೆ ನೀಡಿದ್ದಾರೆ. ಸಂವಿಧಾನದ ಪ್ರತಿಯನ್ನು ಸುಟ್ಟು ಹಾಕಿದರೂ ಪ್ರಧಾನಿ ನರೇಂದ್ರ ಮೋದಿ ಮೌನವಾಗಿಯೇ ಕುಳಿತಿದ್ದರು. ಸುಪ್ರೀಮ್ ಕೋರ್ಟಿನ ಐವರು ನ್ಯಾಯಾಧೀಶರು ರಸ್ತೆ ಮೇಲೆ ಕುಳಿತು ಪತ್ರಿಕಾಗೋಷ್ಠಿ ನಡೆಸುವಂತಾಯಿತು. ಇಂಥ ಹತ್ತು ಹಲವಾರು ಸಂವಿಧಾನ ವಿರೋಧಿ ಕೃತ್ಯಗಳು ಬಿಜೆಪಿ ಅವಧಿಯಲ್ಲಿ ನಡೆದಿದೆ. ಆದರೆ ಈಗ ಅಂಬೇಡ್ಕರ್ ಮತ್ತೆ ಹುಟ್ಟಿ ಬಂದರೂ ಸಂವಿಧಾನ ಬದಲಾಯಿಸಲು ಸಾಧ್ಯವಿಲ್ಲ ಎನ್ನುತ್ತಿದ್ದಾರೆ. ಏಕಾಏಕಿ ಬಿಜೆಪಿ ನಾಯಕರಿಗೆ ಸಂವಿಧಾನದ ಮೇಲೆ ಪ್ರೀತಿ ಹುಟ್ಟಿಕೊಂಡಿದ್ದು ಏಕೆ ಎಂದರು.

ಪ್ರಧಾನಿ ನರೇಂದ್ರ ಮೋದಿ ಕಾಂಗ್ರೆಸ್ ಸರಕಾರದ ಅವಧಿಯಲ್ಲಿ ಮಾತ್ರವಲ್ಲ, ಬಿಜೆಪಿ ಸರಕಾರದ ಅವಧಿಯಲ್ಲೂ ಕರ್ನಾಟಕ ಪ್ರವಾಸೋದ್ಯಮವನ್ನು ನಿರ್ಲಕ್ಷಿಸಿದ್ದಾರೆ. ಕರಾವಳಿ ಅಭಿವೃದ್ಧಿಗೆ 95 ಕೋಟಿ ರೂ. ಪ್ರಸ್ತಾವನೆ ಸಲ್ಲಿಸಲಾಗಿತ್ತು. ಆದರೆ ಕೇವಲ 19 ಕೋಟಿ ರೂ. ಬಿಡುಗಡೆ ಮಾಡಿ ಆ ಯೋಜನೆಯನ್ನೇ ಸ್ಥಗಿತಗೊಳಿಸಿದರು. ಗೋಲ್ಡನ್ ಚಾರಿಯಟ್ ರೈಲು ಸೇವೆಯನ್ನೂ ನಿಲ್ಲಿಸಿದರು ಎಂದು ಸಚಿವ ಎಚ್.ಕೆ. ಪಾಟೀಲ ಆರೋಪಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾಜಿ ಶಾಸಕರಾದ ಜಿ.ಎಸ್. ಗಡ್ಡದೇವರಮಠ, ರಾಮಣ್ಣ ಲಮಾಣಿ, ರಾಮಕೃಷ್ಣ ದೊಡ್ಡಮನಿ, ಕಾಂಗ್ರೆಸ್ ಮುಖಂಡರಾದ ಬಿ.ಬಿ. ಅಸೂಟಿ, ಗುರುನಾಥ ದಾನಪ್ಪನವರ, ಸುಜಾತಾ ದೊಡ್ಡಮನಿ ಇತರರು ಉಪಸ್ಥಿತರಿದ್ದರು.

ಸಮಾನತೆಯ ಜಾಥಾ ಸಮಾರೋಪ ಕಾರ್ಯಕ್ರಮದಲ್ಲಿ ಬಸವರಾಜ ಬೊಮ್ಮಾಯಿ

# ಅನಿಲ್‌ರ ದೂರದೃಷ್ಟಿ ಸಮಾಜಕ್ಕೆ ಮಾದರಿ

■ವಿಜಯಸಾಕ್ಷಿ ಸುದ್ದಿ, ಗದಗ

ಅನಿಲ ಮೆಣಸಿನಕಾಯಿ ಗದಗ ಕ್ಷೇತ್ರದಲ್ಲಿ ಜನೋಪಯೋಗಿ ಕೆಲಸಗಳನ್ನು ಮಾಡಿದ್ದಾರೆ. ಸಮಾನತೆಗಾಗಿ ಅವರ ಹೊಂದಿರುವ ದೂರದೃಷ್ಟಿ ಸಮಾಜಕ್ಕೆ ಉತ್ತಮ ಸಂದೇಶ ನೀಡಲಿದೆ. ಅನಿಲ್ ಮೆಣಸಿನಕಾಯಿ ಕೆಲಸಕ್ಕೆ ನಾನು ಸದಾ ಬೆಂಬಲವಾಗಿ ಇರುತ್ತೇನೆ ಎಂದು ಮಾಜಿ ಮುಖ್ಯಮಂತ್ರಿ, ಹಾವೇರಿ–ಗದಗ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಬಸವರಾಜ ಬೊಮ್ಮಾಯಿ ಹೇಳಿದರು.

ಭಾನುವಾರ ರಾತ್ರಿ ಬಿಜೆಪಿ ಮುಖಂಡ ಅನಿಲ ಮೆಣಸಿನಕಾಯಿ ಅವರ ನಿವಾಸದಲ್ಲಿ ಸಮಾನತೆಯ ಮಂದಿರ ಪ್ರತಿಷ್ಠಾಪನೆ ಅಂಗವಾಗಿ ನಡೆದ ಸಮಾನತೆಯ ಜಾಥಾ ಸಮಾರೋಪ ಹಾಗೂ ಶ್ರೀರಾಮ, ಬುದ್ಧ, ಬಸವ, ಅಂಬೇಡ್ಕರ್ ಹಾಗೂ ಸಂತ ಶಿಶುನಾಳ ಶರೀಫರ ಮೂರ್ತಿ ಪ್ರತಿಷ್ಠಾಪನೆ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು.




ಬಿಜೆಪಿ ಮುಖಂಡ ಅನಿಲ ಮೆಣಸಿನಕಾಯಿ ಮಾತನಾಡಿ, ಸರ್ವರಿಗೂ ಸಮಬಾಳು ಎಂಬ ಆಶಯದೊಂದಿಗೆ ಕುರ್ತಕೋಟಿ ಗ್ರಾಮದಲ್ಲಿ ಸಮಾನತೆಯ ಮಂದಿರ ನಿರ್ಮಾಣದ ಸಂಕಲ್ಪ ಮಾಡಿದ್ದೇವೆ. ಈ ಹಿನ್ನೆಲೆಯಲ್ಲಿ ಮನುಕುಲಕ್ಕಾಗಿ, ಮನುಕುಲದ ಸಮಾನತೆಗಾಗಿ ಈ ಬೃಹತ್ ಜಾಥಾ ಮತ್ತು ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಗದಗ ಭಾವೈಕ್ಯತೆ ಹೊಂದಿರುವ ಜಿಲ್ಲೆ. ಇಲ್ಲಿನ ಜನರು ಜಾತಿ, ಮತ, ಪಂಥ ಮರೆತು ಮನುಷ್ಯರಾಗಿ ಬದುಕಬೇಕು ಎಂಬ ಭಾವನೆ ಹೊಂದಿದ್ದಾರೆ. ಈ ನಿಟ್ಟಿನಲ್ಲಿ ಸಮಾನತೆಯ ಸಂದೇಶ ಸಾರಿದ ಶ್ರೀರಾಮ, ಅಂಬೇಡ್ಕರ್, ಬುದ್ಧ, ಬಸವ ಮತ್ತು ಶರೀಫರ ಮಂದಿರಗಳನ್ನು ಜಿಲ್ಲೆಯ ಕುರ್ತಕೋಟಿ ಗ್ರಾಮದಲ್ಲಿ ನಿರ್ಮಿಸಲಾಗುವುದು ಎಂದರು.

ಬಿಜೆಪಿ ಸಮಾನತೆಗಾಗಿಯೇ ಜನ್ಮತಾಳಿದ ಪಕ್ಷ. ಆದರೆ, ಕಾಂಗ್ರೆಸ್ ಒಡೆದು ಆಳುವ ನೀತಿಯನ್ನು ಅನುಸರಿಸುತ್ತಿದೆ. ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷ ನೀಡಿದ ಪೊಳ್ಳು ಭರವಸೆಗಳಿಗೆ ಮತದಾರರು ಮರುಳಾಗಬೇಡಿ ಎಂದು ಬಸವರಾಜ ಬೊಮ್ಮಾಯಿ ಹೇಳಿದರು.

ಸಮಾರಂಭದಲ್ಲಿ ನರಗುಂದ ಶಾಸಕ ಸಿ.ಸಿ. ಪಾಟೀಲ, ಬಿಜೆಪಿ ಜಿಲ್ಲಾಧ್ಯಕ್ಷ ರಾಜು ಕುರುಡಗಿ, ಬಿಜೆಪಿ ಮುಖಂಡರಾದ ಕಾಂತಿಲಾಲ್ ಬನ್ಸಾಲಿ ಮುಂತಾದವರು ಉಪಸ್ಥಿತರಿದ್ದರು.

## ಸಿಎಂ ಸಿದ್ದರಾಮಯ್ಯರಿಗೆ ಸೋಲಿನ ಭೀತಿ



■ವಿಜಯಸಾಕ್ಷಿ ಸುದ್ದಿ, ಗದಗ

ಜೆಡಿಎಸ್–ಬಿಜೆಪಿ ಮೈತ್ರಿಯ ಕುರಿತು ಮುಖ್ಯಮಂತ್ರಿ ಸಿದ್ದರಾಮಯ್ಯ 'ನಾಯಿ ಹಸಿದಿತ್ತು, ಅನ್ನ ಹಳಸಿತ್ತು' ಎನ್ನುವ ಮಾತಿಗೆ ಹೋಲಿಕೆ ಮಾಡಿದ್ದಾರೆ. ಆದರೆ ನಾಯಿಗೆ ನಿಷ್ಠೆ ಜಾಸ್ತಿ. ಆ ಕಾರಣಕ್ಕಾಗಿಯೇ ರೈತರ ಸಾಲ ಮನ್ನಾ ಮಾಡುವಂಥ ದೊಡ್ಡ ನಿರ್ಧಾರ ತೆಗೆದುಕೊಂಡಿತು ಎನ್ನುವುದು ಅವರಿಗೆ ಗೊತ್ತಿಲ್ಲ ಎಂದು ಜೆಡಿಎಸ್ ರಾಜ್ಯ ವಕ್ತಾರ ವೆಂಕನಗೌಡ ಗೋವಿಂದಗೌಡ್ರ ವ್ಯಂಗ್ಯವಾಡಿದರು.

ನಗರದ ಪ್ರವಾಸಿ ಮಂದಿರದಲ್ಲಿ ಸೋಮವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸಿಎಂ ಸಿದ್ದರಾಮಯ್ಯ ಅವರು ಸೋಲುವ ಭೀತಿಯಿಂದ ಇಂತಹ ಹೇಳಿಕೆಗಳನ್ನು ನೀಡುತ್ತಿದ್ದಾರೆ. ಬಿಜೆಪಿ–ಜೆಡಿಎಸ್ ಮೈತ್ರಿಯಿಂದ ರಾಜ್ಯದಲ್ಲಿ ಹೆಚ್ಚಿನ ಸ್ಥಾನಗಳನ್ನು ಗೆಲ್ಲುವುದು ನಿಶ್ಚಿತವಾಗಿದೆ. ಆ ಸತ್ಯವನ್ನು ಅರಗಿಸಿಕೊಳ್ಳಲಾಗದೆ ಮೈತ್ರಿ ಕುರಿತು ಅಪಹಾಸ್ಯ ಮಾಡುತ್ತಿದ್ದಾರೆ ಎಂದು ಆರೋಪಿಸಿದರು.

ಇನ್ನು ಮಾಜಿ ಸಿಎಂ ಕುಮಾರಸ್ವಾಮಿ ಅವರ ಹೇಳಿಕೆಯನ್ನು ತಿರುಚುವ ಪ್ರಯತ್ನಗಳು ಕಾಂಗ್ರೆಸ್ಸಿಗರಿಂದ ನಡೆದಿದೆ. ಕಾಂಗ್ರೆಸ್ ಹಿರಿಯ ನಾಯಕರೊಬ್ಬರು ಚಿತ್ರನಟಿ ಕಂಗನಾ ರಾಣಾವತ್ ಬಗ್ಗೆ ಕೀಳು ಮಟ್ಟದ ಅಭಿಪ್ರಾಯ ವ್ಯಕ್ತಪಡಿಸಿದ್ದು, ಸ್ವತಃ ಸಿದ್ದರಾಮಯ್ಯ ಅವರೇ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರನ್ನು ಏಕವಚನದಲ್ಲಿ ಕರೆದಿದ್ದು ಮಹಿಳೆಯರಿಗೆ ಮಾಡಿದ ಅವಮಾನ ಅಲ್ಲವೇ ಎಂದು ಪ್ರಶ್ನಿಸಿದರು.

ಸಿದ್ದರಾಮಯ್ಯ ಅವರಿಗೆ ತಮ್ಮ ಪಕ್ಷದ ಹಿತಾಸಕ್ತಿಗಿಂತ ಜೆಡಿಎಸ್ ಹಿತಾಸಕ್ತಿಯೇ ಮುಖ್ಯವಾಗಿದೆ. ಆ ಕಾರಣಕ್ಕಾಗಿ ಪದೇ ಪದೇ ಜೆಡಿಎಸ್ ವಿಷಯವನ್ನು ಪ್ರಸ್ತಾಪಿಸುತ್ತಾರೆ. ಜೆಡಿಎಸ್‌ಗೆ ದೇವೇಗೌಡರಂಥ ಹಿರಿಯ ನಾಯಕರ ಮಾರ್ಗದರ್ಶನವಿದೆ ಎನ್ನುವುದನ್ನು ಅರ್ಥ ಮಾಡಿಕೊಳ್ಳಬೇಕು ಎಂದರು. ಸುದ್ದಿಗೋಷ್ಠಿಯಲ್ಲಿ ಪ್ರಫುಲ್ ಪುಣೇಕರ್ ಉಪಸ್ಥಿತರಿದ್ದರು.

ನರೇಗಾ ಕಾಮಗಾರಿ ಸ್ಥಳದಲ್ಲಿ ಮತದಾನ ಬಗ್ಗೆ ಅರಿವು ಮೂಡಿಸಿದ ಕಬ್ಬಡಿ ಕ್ರೀಡಾಪಟುಗಳು

# ಯೋಗ್ಯ ವ್ಯಕ್ತಿಯನ್ನು ಆಯ್ಕೆ ಮಾಡಿ

■ವಿಜಯಸಾಕ್ಷಿ ಸುದ್ದಿ, ನರಗುಂದ

ಲೋಕಸಭಾ ಚುನಾವಣೆ ಹಿನ್ನೆಲೆಯಲ್ಲಿ ತಾಲೂಕು ಸ್ವೀಪ್ ಸಮಿತಿಯಿಂದ ನಡೆದ ಮತದಾನ ಜಾಗೃತಿ ಕಾರ್ಯಕ್ರಮದಲ್ಲಿ ರಾಷ್ಟ್ರ ಮಟ್ಟದ ಮಹಿಳಾ ಕಬ್ಬಡಿ ಕ್ರೀಡಾಪಟುಗಳು ಭಾಗವಹಿಸಿ ನರೇಗಾ ಕೂಲಿಕಾರರಿಗೆ ಮತದಾನ ಜಾಗೃತಿ ಮೂಡಿಸಿದರು.

ಚುನಾವಣೆ ರಾಯಭಾರಿಗಳಂತೆ ಮತದಾನ ಜಾಗೃತಿ ಕಾರ್ಯದಲ್ಲಿ ಕಲಕೇರಿ ಗ್ರಾಮದ ರಾಷ್ಟ್ರಮಟ್ಟದ ಕಬ್ಬಡಿ ಮಹಿಳಾ ಕ್ರೀಡಾಪಟುಗಳಾದ ಪ್ರೇಮಾ ಪಾಟೀಲ್, ನಿರ್ಮಲಾ ಪರಮೇಶ್ವರ್ ಮತ್ತು ಮೇಘಾ ಮಳ್ಳಸಿದ್ಧನವರ ಅವರು ಭಾಗವಹಿಸಿ ಕೂಲಿಕಾರರಿಗೆ ಮತದಾನದ ಬಗ್ಗೆ ತಿಳಿಹೇಳಿದರು.

ಈ ವೇಳೆ ರಾಷ್ಟ್ರಮಟ್ಟದ ಅಂಡರ್ 20 ಜೂನಿಯರ್ ಕಬ್ಬಡಿ ಕ್ರೀಡಾಪಟು ಪ್ರೇಮಾ ಪಾಟೀಲ್ ಮಾತನಾಡಿ, ಮೊದಲ ಬಾರಿಗೆ ನಾನು ಲೋಕಸಭಾ ಚುನಾವಣೆಯಲ್ಲಿ ಈ ಬಾರಿ ಮತದಾನ ಮಾಡುತ್ತಿದ್ದೇನೆ. ಮತದಾನ ಮಾಡುತ್ತಿರುವುದು ಖುಷಿಯ ಸಂಗತಿ ಎನಿಸಿದೆ.



ಯಾವುದೇ ಮತದಾರರು ಜಾತಿ, ಆಮಿಷಕ್ಕೆ ಒಳಗಾಗದೇ ಸ್ವಂತ ಬುದ್ಧಿಯಿಂದ ಆಲೋಚಿಸಿ ಯೋಗ್ಯ ವ್ಯಕ್ತಿಯನ್ನು ಆಯ್ಕೆ ಮಾಡಬೇಕು. ಕೂಲಿಕಾರರು ಮೇ 7ರಂದು ಯಾವುದೇ ಕೆಲಸಕ್ಕೆ ತೆರಳದೇ ಮತದಾನ ಮಾಡಿ ತಮ್ಮ ಹಕ್ಕನ್ನು ಚಲಾಯಿಸಬೇಕು ಎಂದು ಹೇಳಿದರು.

ರಾಷ್ಟ್ರಮಟ್ಟದ ಅಂಡರ್ 19 ಸ್ಕೂಲ್ ಗೇಮ್ ಕಬ್ಬಡಿ ಕ್ರೀಡಾಪಟು ನಿರ್ಮಲಾ ಪರಮೇಶ್ವರ ಮಾತನಾಡಿ, ನಮ್ಮೂರಲ್ಲೇ ಎಲ್ಲ ಕೂಲಿಕಾರರಿಗೆ ಪಂಚಾಯತ ವತಿಯಿಂದ ಕೆಲಸ ನೀಡುತ್ತಿದ್ದಾರೆ. ಬೇಸಿಗೆ ಇದೆ, ಹೊಲದಲ್ಲಿ ಕೆಲಸ ಇಲ್ಲ ಎಂಬ ಚಿಂತೆ ದೂರವಾಗಿದೆ. ಹೀಗಾಗಿ ಬೇಸಿಗೆ ಮುಗಿಯುವರೆಗೂ ನರೇಗಾ ಕಾಮಗಾರಿ ಕೆಲಸ ಮಾಡಿ ಮೇ 7ರಂದು ಕಡ್ಡಾಯವಾಗಿ ಮತದಾನ ಮಾಡೋಣ ಎಂದರು.

ಸ್ವತಃ ಕ್ರೀಡಾಪಟು ಮೇಘಾ ಮಳ್ಳಸಿದ್ಧನವರ ಅವರು ಮತದಾನ ಜಾಗೃತಿ ಕಾರ್ಯಕ್ರಮದಲ್ಲಿ ಹಾಜರಿದ್ದ ಎಲ್ಲ ಕೂಲಿಕಾರರಿಗೆ ಪ್ರತಿಜ್ಞಾವಿಧಿಯನ್ನು ಬೋಧಿಸಿದರು. ಈ ಸಂದರ್ಭದಲ್ಲಿ ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿ ಸೋಮಶೇಖರ್ ಬಿರಾದರ್, ಹುಣಶೀಕಟ್ಟಿ ಗ್ರಾ.ಪಂ ಅಧಿಕಾರಿ ವಿ.ಆರ್. ರಾಯನಗೌಡರ, ಐಇಸಿ ಸಂಯೋಜಕ ಸುರೇಶ್ ಬಾಳಿಕಾಯಿ, ಬಿಎಫ್‌ಟಿ ಬಸವರಾಜ ಚಿಮ್ಮನಕಟ್ಟಿ, ನರೇಗಾ ಸಿಬ್ಬಂದಿ ಮತ್ತು ಹುಣಶಿಕಟ್ಟಿ ಗ್ರಾ.ಪಂ ಸಿಬ್ಬಂದಿ ವರ್ಗದವರು ಹಾಜರಿದ್ದರು.

## ಸಾಕ್ಷಿ ಸುಭಾಷಿತ

**ನಾಯಕನಾಗಿ ಬಾಳು; ಅದಕ್ಕಾಗಿ ಜೀವನದಲ್ಲಿ ಹೆದರಿಕೆಯನ್ನು ಬಿಡು**

**–ಸ್ವಾಮಿ ವಿವೇಕಾನಂದ**

## ಸಂಪಾದಕೀಯ

# ಸಂವಿಧಾನಕ್ಕೆ ಅಪಾಯ ತಪ್ಪಿದ್ದಲ್ಲ

ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಅವರ ಜಯಂತಿಯನ್ನು ಈಗಷ್ಟೇ ಆಚರಣೆ ಮಾಡಿದ್ದೇವೆ. ಅದರಲ್ಲೂ ಲೋಕಸಭೆ ಚುನಾವಣೆ ಇರುವುದರಿಂದ ಈ ಬಾರಿ ಅಂಬೇಡ್ಕರ್ ಎಲ್ಲ ಪಕ್ಷದವರಿಗೂ ನೆನಪಾಗಿದ್ದಾರೆ. ಸಂವಿಧಾನ ರಕ್ಷಣೆಯ ಮಾತುಗಳನ್ನ ಆಡುತ್ತಿದ್ದಾರೆ.

ಪ್ರತಿ ಚುನಾವಣೆಯ ಸಂದರ್ಭದಲ್ಲಿ ಎಲ್ಲ ಪಕ್ಷಗಳಿಗೂ ಅಂಬೇಡ್ಕರ್ ನೆನಪಾಗುತ್ತಾರೆ. ಅಧಿಕಾರ ಹಿಡಿಯುವ ಮುನ್ನ ಸಂವಿಧಾನ, ಅಂಬೇಡ್ಕರ್ ಹೆಸರು ಹೇಳುತ್ತಲೇ ಮತ ಕೇಳುತ್ತಾರೆ. ಚುನಾವಣೆಯಲ್ಲಿ ಗೆದ್ದ ನಂತರ ಅದೇ ಅಂಬೇಡ್ಕರ್ ಸಂವಿಧಾನಕ್ಕೆ ಅವಮಾನ ಮಾಡಲಾಗುತ್ತದೆ.

ಇದು ಕೇವಲ ಯಾವುದೇ ಒಂದು ಪಕ್ಷಕ್ಕೆ ಸೀಮಿತವಾದ ಆರೋಪ ಅಲ್ಲ. ಸಂವಿಧಾನ ಜಾರಿಗೆ ಕಾರಣವಾದ ಕಾಂಗ್ರೆಸ್‌ನಿಂದ ಹಿಡಿದು ಕೋಮುವಾದಿ ಪಟ್ಟ ಕಟ್ಟಿಕೊಂಡಿರುವ ಬಿಜೆಪಿಗೂ ಅನ್ವಯಿಸುತ್ತದೆ.

ಎರಡು ಪಕ್ಷಗಳು ತಮ್ಮ ಅಧಿಕಾರ ಅವಧಿಯಲ್ಲಿ ಸಂವಿಧಾನದ ಆಶಯಗಳಿಗೆ ಧಕ್ಕೆ ಉಂಟು ಮಾಡಿದ ಅನೇಕ ಉದಾಹರಣೆಗಳು ಕಣ್ಣ ಮುಂದಿದೆ. ಇಂದಿರಾಗಾಂಧಿ ಹೇರಿದ ತುರ್ತು ಪರಿಸ್ಥಿತಿಯಾಗಲಿ, ರಾಜೀವ್ ಗಾಂಧಿ ಮಾಡಿದ ಸಂವಿಧಾನದ ತಿದ್ದುಪಡಿಯಾಗಲಿ ಸಂವಿಧಾನಕ್ಕೆ ಮಾಡಿದ ಅಪಚಾರವೇ.

ಇನ್ನು ಸಬ್ ಕಾ ಸಾಥ್ ಸಬ್ ಕಾ ವಿಕಾಸ ಎನ್ನುತ್ತಾ ಅಧಿಕಾರಕ್ಕೆ ಬಂದ ಬಿಜೆಪಿ, ಜಾತ್ಯಾತೀತ ರಾಷ್ಟ್ರದ ವಿಷಯದಲ್ಲಿ ಅಪಸ್ವರ ಎತ್ತುವ ಮೂಲಕ ಸಂವಿಧಾನದ ಪೂರ್ವ ಪೀಠಿಕೆಗೆ ಅವಮಾನ ಮಾಡಿದರು. ಸಂಸದರೊಬ್ಬರು ಸಂವಿಧಾನವನ್ನೇ ಬದಲಾಯಿಸುತ್ತೇವೆ ಎಂದರು. ಸಂಸತ್ ಭವನದಲ್ಲಿಯೇ ಸಂವಿಧಾನದ ಪ್ರತಿಗಳಿಗೆ ಬೆಂಕಿ ಹಚ್ಚಲಾಯಿತು.

ಹೀಗೆ ಪಟ್ಟಿ ಮಾಡುತ್ತಾ ಹೋದರೆ ಒಂದೊಂದು ಪಕ್ಷವು ಒಂದಲ್ಲೊಂದು ರೀತಿಯಲ್ಲಿ ಸಂವಿಧಾನಕ್ಕೆ ಅಪಚಾರ ಮಾಡುತ್ತಲೇ ಬಂದಿವೆ. ದಶಕಗಳೇ ಉರುಳಿದರು ಸಂವಿಧಾನ ಇನ್ನೂ ಅಪಾಯದಲ್ಲಿಯೇ ಇದೆ.

**ಎಪ್ರಿಲ್ 17, ಶ್ರೀರಾಮ ನವಮಿ ಹಬ್ಬದ ನಿಮಿತ್ತ ವಿಶೇಷ ಲೇಖನ**

# ಶ್ರೀರಾಮನ ಆದರ್ಶ ಗುಣಗಳನ್ನು ಪಾಲಿಸೋಣ

ರಾಮಾಯಣವು ಹಿಂದೂಗಳ ಪವಿತ್ರ ಗ್ರಂಥಗಳಲ್ಲಿ ಪ್ರಮುಖವಾದುದು. ಈ ಬೃಹದ್ಕಾವ್ಯವು ವಾಲ್ಮೀಕಿ ಮಹರ್ಷಿಗಳಿಂದ ರಚಿಸಲ್ಪಟ್ಟಿದೆ. ರಾಮಾಯಣವನ್ನು ತತ್ಪುರುಷ ಸಮಾಸವಾಗಿ ವಿಭಜಿಸಿದರೆ (ರಾಮನ+ಅಯನ=ರಾಮಾಯಣ) 'ರಾಮನ ಕಥೆ' ಎಂಬ ಅರ್ಥ ಬರುತ್ತದೆ. ಹಿಂದೂ ಧಾರ್ಮಿಕ ನಂಬಿಕೆಯ ಪ್ರಕಾರ, ರಾಮ ಹಿಂದೂ ತ್ರಿಮೂರ್ತಿಗಳಲ್ಲಿ ಒಬ್ಬನಾದ ವಿಷ್ಣುವಿನ 7ನೇ ಅವತಾರ. ರಾಮನ ಅವತಾರದ ಉದ್ದೇಶ ಭೂಮಿಯ ಮೇಲೆ ಧರ್ಮವನ್ನು ಸ್ಥಾಪಿಸುವುದು.

ಜನರು ನಂಬಿರುವ ಹೃದಯ ಸಾಮ್ರಾಟ, ಮರ್ಯಾದಾ ಪುರುಷೋತ್ತಮ, ದಶರಥ ನಂದನ ಶ್ರೀರಾಮ ಹುಟ್ಟಿದ ದಿನವನ್ನು ಶ್ರೀರಾಮನವಮಿ ಹಬ್ಬವೆಂದು ಆಚರಣೆ ಮಾಡಲಾಗುತ್ತಿದ್ದು, ಈ ಹೊಸ ಸಂವತ್ಸರದಲ್ಲಿ ಬರುವ ಮೊದಲ ಹಬ್ಬವೇ ಶ್ರೀರಾಮ ನವಮಿ. ರಾಮ ಹುಟ್ಟಿದ ದಿನವನ್ನು ರಾಮ ನವಮಿ ಎಂದು ಆಚರಿಸಲಾಗುತ್ತದೆ. ಈ ದಿನವನ್ನು ಯುಗಾದಿಯ ಎಂಟು ದಿನಗಳ ನಂತರ ಚೈತ್ರ ಮಾಸದ ಶುಕ್ಲ ಪಕ್ಷದ ನವಮಿ ತಿಥಿಯಂದು ಆಚರಿಸಲಾಗುತ್ತದೆ.

ತ್ರೇತಾಯುಗದಲ್ಲಿ ಅಯೋಧ್ಯೆಯಲ್ಲಿ ರಾಣಿ ಕೌಸಲ್ಯೆ ಮತ್ತು ರಾಜ ದಶರಥನಿಗೆ ಈ ದಿನದಂದು ವಿಷ್ಣುವಿನ ಅವತಾರವಾದ ಭಗವಂತ ಶ್ರೀ ರಾಮನು ಭೂಮಿಗೆ ಕಾಲಿಟ್ಟ ಎಂಬುದು ಭಕ್ತರ ನಂಬಿಕೆಯಾಗಿದೆ. ಧರ್ಮವನ್ನು ರಕ್ಷಿಸಲು ಮತ್ತು ಉತ್ತಮ ನಡತೆಯ ಮಾದರಿಯನ್ನು ಹೊಂದಿಸಲು ರಾಮ ತಮ್ಮ ಇಡೀ ಜೀವನವನ್ನು ಪಣಕ್ಕಿಟ್ಟ. ಈ ಕಾರಣದಿಂದ ಅವನನ್ನು ಮರ್ಯಾದಾ ಪುರುಷೋತ್ತಮ ಶ್ರೀರಾಮ ಎಂದು ಕರೆಯುತ್ತಾರೆ. ಕಷ್ಟಕಾಲದಲ್ಲಿಯೂ ಶ್ರೀರಾಮನು ಧರ್ಮ ಮಾರ್ಗವನ್ನು ಅರ್ಥಕ್ಕೆ ಬಿಡದೆ ಸಮಾಜದ ಮುಂದೆ ತಾನೊಬ್ಬ ಪರಿಪೂರ್ಣ ವ್ಯಕ್ತಿ ಎಂದು ಸಾಬೀತುಪಡಿಸಿದ.

ಚೈತ್ರ ಮಾಸದ ಶುಕ್ಲ ಪಕ್ಷದ ಪಾಡ್ಯದಿಂದ ನವಮಿವರೆಗೆ ರಾಮಾಯಣವನ್ನು ಭಕ್ತಿ, ಶ್ರದ್ಧೆಗಳಿಂದ ಪಾರಾಯಣ ಮಾಡಿ, ನವಮಿ ದಿನ ರಾಮ ಪಟ್ಟಾಭಿಷೇಕ ಪಾರಾಯಣ ಮಾಡಿ ಹಬ್ಬವನ್ನು ಶ್ರೀರಾಮ ಜನಿಸಿದ ಸ್ಥಳ ಅಯೋಧ್ಯೆಯಲ್ಲಿ ವಿಜೃಂಭಣೆಯಿಂದ ಆಚರಣೆ ಮಾಡಲಾಗುತ್ತದೆ. ಹಬ್ಬದ ದಿನದಂದು ರಾಮನ ಭಜನೆ, ಕೀರ್ತನೆ ಹಾಗೂ ಮೆರವಣಿಗೆಗಳನ್ನು ನಡೆಸಲಾಗುತ್ತದೆ. ರಾಮನವಮಿಯಂದು ಸೂರ್ಯ ದೇವನ ಪ್ರಾರ್ಥನೆಯೊಂದಿಗೆ ಹಬ್ಬ ಆರಂಭವಾಗುತ್ತದೆ. ಏಕೆಂದರೆ, ಶ್ರೀರಾಮನು ಸೂರ್ಯವಂಶಸ್ಥನಾಗಿದ್ದು, ಶಕ್ತಿಯ



ಪ್ರತೀಕವಾಗಿರುವ ಸೂರ್ಯ ದೇವರ ಆರಾಧನೆ ಮೂಲಕ ರಾಮನವಮಿ ಆರಂಭವಾಗುತ್ತದೆ.

ಶ್ರೀ ರಾಮನನ್ನು ಪೂಜಿಸುವಾಗ ಶ್ರೀ ರಾಮನಾಮ ಜಪ, ಸಂಕೀರ್ತನೆ ಕಡ್ಡಾಯ. ರಾಮನಿಗೆ ಮಜ್ಜಿಗೆ, ಪಾನಕ, ಕೋಸಂಬರಿ ಇತ್ಯಾದಿಗಳನ್ನು ನೈವೇದ್ಯವಾಗಿ ಅರ್ಪಿಸಬೇಕು. ನೈವೇದ್ಯವಾದ ಮೇಲೆ ಮನೆಯವರಿಗೆ ಮಾತ್ರವಲ್ಲದೆ, ಮನೆಗೆ ಆಗಮಿಸುವ ಅತಿಥಿಗಳಿಗೆ, ಹೊರಗಿನವರಿಗೆ ಕೂಡ ಪಾನಕ–ಕೋಸಂಬರಿಯನ್ನು ನೀಡಿ ಸತ್ಕರಿಸಬೇಕು.


ಉತ್ಸವದ ಮಹತ್ವವು ದುಷ್ಟರ ಮೇಲೆ ಒಳ್ಳೆಯತನದ ವಿಜಯ. ಅಧರ್ಮವನ್ನು ಸೋಲಿಸಿ ಧರ್ಮದ ಸ್ಥಾಪನೆಯನ್ನು ಮಾಡಿದ ಕಾರ್ಯವನ್ನು ಸೂಚಿಸುತ್ತದೆ. ಶ್ರಿರಾಮನನ್ನು ಸೂರ್ಯದೇವನ ಪೂರ್ವಜನೆಂದೂ ಜನ ನಂಬುತ್ತಾರೆ. ಉತ್ತರ ಭಾರತದಲ್ಲಿ ರಾಮ ನವಮಿಯನ್ನು ರಾಮದೇವರ ಹುಟ್ಟುಹಬ್ಬವೆಂದು ಆಚರಣೆ ಮಾಡುತ್ತಾರೆ. ಆದರೆ ದಕ್ಷಿಣ ಭಾರತದಲ್ಲಿ ರಾಮ–ಸೀತೆಯರ ವಿವಾಹದ ದಿನವಾಗಿ ರಾಮ ನವಮಿಯನ್ನು ಆಚರಣೆ ಮಾಡುತ್ತಾರೆ. ಮಹಿಮಾನ್ವಿತ ದೇವತೆಗಳ ದೈವಿಕ ಬಂಧವಾಗಿ ರಾಮನವಮಿಯನ್ನು ಅವರು ಆಚರಿಸುತ್ತಾರೆ. ಭಗವಂತ ರಾಮನ ಹೆಸರನ್ನು ಹಿಂದೂ ಧರ್ಮಗ್ರಂಥಗಳಲ್ಲಿ ಮಾತ್ರವಲ್ಲ, ಜೈನ ಮತ್ತು ಬೌದ್ಧ ಧಾರ್ಮಿಕ ಗ್ರಂಥಗಳಲ್ಲಿಯೂ ಉಲ್ಲೇಖಿಸಲಾಗಿದೆ.

ಒಟ್ಟಾರೆಯಾಗಿ ರಾಮನ ಧೈರ್ಯ, ಕರ್ತವ್ಯನಿಷ್ಠೆ, ಪಿತೃವಾಕ್ಯ ಪರಿಪಾಲನೆ, ರಾಜ್ಯಾಡಳಿತ, ಪ್ರಜಾಪರಿಪಾಲನೆ, ಕರ್ತವ್ಯ, ಗೌರವ, ಏಕಪತ್ನೀವ್ರತ, ಸೋದರಪ್ರೇಮ ಹೀಗೇ ಅನೇಕ ವಿಚಾರದ ಶ್ರೀ ರಾಮ ನಮ್ಮೆಲ್ಲರಿಗೂ ಆದರ್ಶ. ಹೀಗಾಗಿಯೇ ಆತನ ಹುಟ್ಟುಹಬ್ಬವನ್ನು ಹೆಚ್ಚು ಸಂಭ್ರಮದಿಂದ ದೇಶದೆಲ್ಲೆಡೆ ಆಚರಿಸುವ ಮೂಲಕ 'ವಸುದೈವ ಕುಟುಂಬಕಂ' ಅಂದರೆ ಇಡೀ ವಿಶ್ವವೇ ಒಂದು ಕುಟುಂಬ ಎಂಬುದನ್ನು ಜಗತ್ತಿಗೆ ಸಾರಿ ಹೇಳಲು ಇಂತಹ ಹಬ್ಬಗಳು ಮಹತ್ವಪೂರ್ಣವಾಗಿವೆ.



**– ಬಸವರಾಜ ಎಮ್.ಯರಗುಪ್ಪಿ,**
ಬಿಆರ್‌ಪಿ–ಶಿರಹಟ್ಟಿ, ಲಕ್ಮೇಶ್ವರ.

ರಾಮ ನವಮಿ ದಿನದಂದು ಬ್ರಾಹ್ಮೀ ಮುಹೂರ್ತದಲ್ಲಿ ಎದ್ದು, ಸ್ನಾನ ಮಾಡಿದ ನಂತರ ಶುಭ್ರವಾದ ಹಳದಿ ಬಣ್ಣದ ಬಟ್ಟೆಯನ್ನು ಧರಿಸಿ ಉಪವಾಸದ ಪ್ರತಿಜ್ಞೆ ಮಾಡಿ, ಗಂಗಾಜಲವನ್ನು ಸಿಂಪಡಿಸಿ ಪೂಜಾ ಸ್ಥಳವನ್ನು ರಾಮನ ಪೂಜೆಯಲ್ಲಿ ತುಳಸಿ ಎಲೆಗಳು ಮತ್ತು ಕಮಲದ ಹೂವು ಕಡ್ಡಾಯವಾಗಿರಬೇಕೆಂಬುದನ್ನು ಗಮನದಲ್ಲಿಟ್ಟುಕೊಳ್ಳಿ. ರಾಮನ ವಿಗ್ರಹವನ್ನು ಹೂಮಾಲೆ ಮತ್ತು ಹೂವುಗಳಿಂದ ಅಲಂಕರಿಸಿ ತೊಟ್ಟಿಲಲ್ಲಿ ತೂಗಾಡಿ. ಇದರ ನಂತರ ರಾಮ ನವಮಿಯ ಷೋಡಶೋಪಚಾರವನ್ನು ಪೂಜಿಸಿ. ಇದರೊಂದಿಗೆ ರಾಮಾಯಣವನ್ನು ಪಠಿಸಿ ಮತ್ತು ರಾಮ ರಕ್ಷಾಸ್ತೋತ್ರವನ್ನೂ ಪಠಿಸಿ. ಶ್ರೀರಾಮನಿಗೆ ಶಾವಿಗೆ ಪಾಯಸ, ಹಣ್ಣುಗಳು ಮತ್ತು ಇತರ ನೈವೇದ್ಯಗಳನ್ನು ಅರ್ಪಿಸಿ. ಪೂಜೆಯ ನಂತರ, ಮನೆಯ ಚಿಕ್ಕ ಹುಡುಗಿಯ ಹಣೆಯ ಮೇಲೆ ತಿಲಕವನ್ನು ಹಚ್ಚಿ ಶ್ರೀರಾಮನ ಆರತಿಯನ್ನು ಮಾಡಿ. ಹೀಗೆ ರಾಮ ನವಮಿಯಂದು ರಾಮನನ್ನು ಪೂಜಿಸುವುದರಿಂದ ಅಥವಾ ರಾಮ ನಮವಿ ವ್ರತವನ್ನು ಆಚರಿಸುವುದರಿಂದ ಭಗವಾನ್ ರಾಮನ ಆಶೀರ್ವಾದವನ್ನು ಪಡೆದುಕೊಳ್ಳಬಹುದು.




**■ವಿಜಯಸಾಕ್ಷಿ ಸುದ್ದಿ, ಗದಗ**

ಗದುಗಿನ ಸೇವಾ ಭಾರತಿ ಟ್ರಸ್ಟ್‌ನ ಅರುಣೋದಯ ವಿಶೇಷ ಅಗತ್ಯವುಳ್ಳ ಮಕ್ಕಳ ಶಾಲೆಯಲ್ಲಿ ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಜಯಂತಿಯನ್ನು ಆಚರಿಸಲಾಯಿತು. ಶಾಲಾ ಆಡಳಿತ ಮಂಡಳಿಯ ಉಪಾಧ್ಯಕ್ಷ ಲುಕ್ಕಣಸಾ ರಾಜೋಳಿ, ಕಾರ್ಯದರ್ಶಿ ಜಯರಾಜ ಮುಳಗುಂದ, ಬಸವರಾಜ ಪಟ್ಟಣಶೆಟ್ಟಿ, ಮಲ್ಲಿಕಾರ್ಜುನ ನಾಗಲಾಪೂರ, ಮುಖ್ಯೋಪಾಧ್ಯಾಯ ಮಲ್ಲಪ್ಪ ಹಕ್ಕಿ ಭಾಗವಹಿಸಿದ್ದರು.


## ಕುಮಾರಸ್ವಾಮಿ ನಡೆ ಖಂಡನೀಯ

**■ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

ಮಹಿಳೆಯರ ಬಗ್ಗೆ ತಾತ್ಸಾರವಾಗಿ ಮಾತನಾಡಿದ ಎಚ್.ಡಿ. ಕುಮಾರಸ್ವಾಮಿಯುವರ ನಡೆ ಖಂಡನೀಯ. ಬಿಜೆಪಿ ಜೊತೆಗೆ ಕೈಜೋಡಿಸಿದ ಕೂಡಲೇ ಮಹಿಳೆಯರ ಬಗ್ಗೆ ಕೆಟ್ಟ ರೀತಿಯಲ್ಲಿ ಮಾತನಾಡತೊಡಗಿದ್ದಾರೆ. ಇದನ್ನು ನಾಡಿನ ಜನತೆ ಖಂಡಿಸಬೇಕು ಎಂದು ವೆಲ್ ಫೇರ್ ಪಾರ್ಟಿ ಆಫ್ ಇಂಡಿಯಾದ ಕರ್ನಾಟಕ ರಾಜ್ಯದ ಅಧ್ಯಕ್ಷ ಅಡ್ವಕೇಟ್ ತಾಹೇರ್ ಹುಸೇನ್ ಹೇಳಿದ್ದಾರೆ.

ಈ ಬಗ್ಗೆ ಪತ್ರಿಕಾ ಹೇಳಿಕೆ ನೀಡಿರುವ ಅವರು, ತುಮಕೂರಿನ ತುರುವೇಕೆರೆಯಲ್ಲಿ ಬಿಜೆಪಿ ಅಭ್ಯರ್ಥಿ ಸೋಮಣ್ಣ ಪರ ಪ್ರಚಾರ ಮಾಡುತ್ತಾ ಕಾಂಗ್ರೆಸ್‌ನ್ನು ಟೀಕಿಸುವ ಭರದಲ್ಲಿ ಕಾಂಗ್ರೆಸ್ ಗ್ಯಾರಂಟಿಯಿಂದ ಹಳ್ಳಿ ಹೆಣ್ಮಕ್ಕಳು ದಾರಿಗೆಟ್ಟಿದ್ದಾರೆ ಎಂದು ಹೇಳಿಕೊಂಡು ಮತ ಗಿಟ್ಟಿಸುವ ಪ್ರಯತ್ನ ಮಾಡಿದರು. ತೆನೆ ಹೊತ್ತ ಮಹಿಳೆ ಕೇವಲ ಚಿಹ್ನೆ ಎಂದು ಭಾವಿಸಿದ್ದು, ಈ ತರಹದ ಮಾತುಗಳು, ಈ ರೀತಿಯ ಪ್ರಚಾರಗಳು ಅವರ ಪಕ್ಷಕ್ಕೆ ಮಾರಕ. ಮಹಿಳಾ ಮತದಾರರ ಬಗ್ಗೆ ಕುಮಾರಸ್ವಾಮಿಯುವರಿಗೆ ಗೌರವವಿರಲಿ. ಮಾಜಿ ಮುಖ್ಯಮಂತ್ರಿಯೊಬ್ಬರಿಗೆ ಇಂತಹ ಮಾತುಗಳು ಶೋಭೆ ತರದು ಎಂದು ಅವರು ಹೇಳಿದ್ದಾರೆ.

## ಪಿಎಸ್‌ಬಿಡಿ ಪ್ರೌಢಶಾಲೆಯಲ್ಲಿ ಡಾ.ಅಂಬೇಡ್ಕರ ಜಯಂತಿ



**■ವಿಜಯಸಾಕ್ಷಿ ಸುದ್ದಿ, ಲಕ್ಮೇಶ್ವರ**

ಪಟ್ಟಣದ ಶ್ರೀಮತಿ ಪಿಎಸ್‌ಬಿಡಿ ಬಾಲಕಿಯರ ಪ್ರೌಢಶಾಲೆಯಲ್ಲಿ ಸಂವಿಧಾನ ಶಿಲ್ಪಿ ಡಾ.ಬಾಬಾಸಾಹೇಬ ಅಂಬೇಡ್ಕರ್ ಅವರ ಜಯಂತಿಯನ್ನು ಆಚರಿಸಲಾಯಿತು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಮುಖ್ಯೋಪಾಧ್ಯಾಯ ಜೆ.ಡಿ. ಲಮಾಣಿ ಮಾತನಾಡಿ, ಅಂಬೇಡ್ಕರರು ಮಧ್ಯಪ್ರದೇಶ ಮೋವ್ ಕಂಟೋನ್ಮೆಂಟ್‌ನಲ್ಲಿ 1891 ಎಪ್ರಿಲ್ 14ರಂದು ಜನಿಸಿದರು. ಪ್ರಾಥಮಿಕ ಶಿಕ್ಷಣವನ್ನು ಮಹಾರಾಷ್ಟ್ರದ ಸತಾರದಲ್ಲಿ ಮುಗಿಸಿ, ಪ್ರೌಢ ಹಾಗೂ ಉನ್ನತ ಶಿಕ್ಷಣವನ್ನು ಮುಂಬೈನಲ್ಲಿ ಹಾಗೂ ಲಂಡನ್ನಿನಲ್ಲಿ ಅರ್ಥಶಾಸ್ತ್ರ ಪದವಿ ಪಡೆದು ಮುಂಬೈನ ಸರ್ಕಾರಿ ಕಾನೂನು ಕಾಲೇಜಿನ ಪ್ರಾಂಶುಪಾಲರಾಗಿ ಸೇವೆ ಸಲ್ಲಿಸಿದರು.

ಭಾರತದ ಸಂವಿಧಾನ ಸಭೆಗೆ ಆಯ್ಕೆಗೊಂಡ ಇವರು ಸ್ವತಂತ್ರ ಭಾರತದ ಮೊದಲ ಕಾನೂನು ಸಚಿವರಾದರು. ನಂತರ ಸಂವಿಧಾನ ಸಭೆಯ ಕರಡು ಸಮಿತಿಯ ಅಧ್ಯಕ್ಷರಾಗಿ ಸಂವಿಧಾನ ರಚಿಸಿದರು. ಭಾರತದ ಸಂವಿಧಾನವನ್ನು ಸಭೆಯು ನವೆಂಬರ್ 26, 1949ರಂದು ಅಂಗೀಕರಿಸಿ ಜನೇವರಿ 26, 1950ರಂದು ಜಾರಿಗೆ ತಂದಿತು ಎಂದು ವಿವರಿಸಿದರು.

ಕಾರ್ಯಕ್ರಮದಲ್ಲಿ ಶಿಕ್ಷಕರಾದ ಎಂ.ಸಿ. ಹಿರೇಮಠ, ಎಸ್.ಎಸ್. ಮಠದ, ಕಾವ್ಯಾ ದೇಸಾಯಿ, ಟಿ.ಎಸ್. ಭಜಂತ್ರಿ, ಮಾಂತು ಕಲಕೇರಿಮಠ ಉಪಸ್ಥಿತರಿದ್ದರು.

# ಜೀವನದಲ್ಲಿ ಉತ್ತಮ ಗುರಿ ಹೊಂದಿ

**■ವಿಜಯಸಾಕ್ಷಿ ಸುದ್ದಿ, ಮುಳಗುಂದ**

ವಿದ್ಯಾರ್ಥಿಗಳು ಉತ್ತಮ ಸಂಸ್ಕಾರ ಬೆಳೆಸಿಕೊಂಡು ಗುರಿ ತಲುಪಲು ಅಧ್ಯಯನ ಶೀಲರಾಗಬೇಕು ಎಂದು ಸೊರಟೂರ ಆದಿಶಕ್ತಿ ಟ್ರಸ್ಟ್ ಅಧ್ಯಕ್ಷ ಶಿವಾನಂದ ಮಾದಣ್ಣವರ ಹೇಳಿದರು.



ಅವರು ಸೊರಟೂರ ಗ್ರಾಮದ ಆದಿಶಕ್ತಿ ಟ್ರಸ್ಟ್‌ನ ನವಶಕ್ತಿ ಬೆಸಿಗೆ ಶಿಬಿರದಲ್ಲಿ ಡಾ. ಬಿ.ಆರ್. ಅಂಬೇಡ್ಕರ್ ಜಯಂತಿ ಹಾಗೂ ಪಿಯುಸಿಯಲ್ಲಿ ಸಾಧನೆ ಮಾಡಿದ ವಿದ್ಯಾರ್ಥಿನಿಯರನ್ನು ಸನ್ಮಾನಿಸಿ ಮಾತನಾಡಿ, ವಿದ್ಯಾರ್ಥಿಗಳು ಜ್ಞಾನದ ಸಂಪತ್ತಿನ ಜತೆಗೆ ಜೀವನದಲ್ಲಿ ಉತ್ತಮ ಗುರಿ ಹೊಂದಬೇಕು. ದೇಶಪ್ರೇಮ, ಸದ್ಭಾವನೆ ಬೆಳೆಸಿಕೊಳ್ಳುವುದರಿಂದ ವಿದ್ಯಾರ್ಥಿ ಜೀವನ ಬಂಗಾರದ ಜೀವನವಾಗುತ್ತದೆ ಎಂದರು.

ಸೊರಟೂರ ಸರಕಾರಿ ಪದವಿಪೂರ್ವ ಕಾಲೇಜಿನ ಸುಧಾ ಮಾಯಪ್ಪನವರ 545 ಅಂಕ ಪಡೆದು ಪ್ರಥಮ, ಶೈನಜಾ ಅತ್ತಿಕಟ್ಟಿ 533 ಅಂಕ ಪಡೆದು ದ್ವಿತೀಯ, ವಿಜಯಲಕ್ಷ್ಮಿ ಗುಡಿ 521 ಅಂಕ ಪಡೆದು ತೃತೀಯ ಸ್ಥಾನ ಪಡೆದ ನಿಮಿತ್ತ ಸನ್ಮಾನಿಸಿ ಗೌರವಿಸಲಾಯಿತು.

ಬಿ.ಕೆ. ರೇಣುಕಾ, ಶಿವಾನಂದ ಮಾಯಪ್ಪನವರ, ಗೌರಮ್ಮಾ ಪೂಜಾರ, ಶೈಲಜಾ ಶೆಟ್ಟರ್, ಗ್ರಾ.ಪಂ ಸದಸ್ಯ ಹುಸೇನಬಿ ಚೋಳನ್ನವರ, ದೇವಕ್ಕ ಮಾದಣ್ಣನವರ, ರಮೇಶ ಓಂಕಾರಿ, ಡಾ. ರಾಠೋಡ್, ಬಾಬುಸಾಬ ಗದಗಿನ, ಹನಮಂತಪ್ಪ ಗುಡಿ, ಮಾಬುಸಾಬ ಬಾಬುಖಾನವರ, ಬಸವರಾಜ ಹಡಪದ ಇದ್ದರು.

## ಡಾ. ಅಂಬೇಡ್ಕರರು ಸಮಾನತೆಯ ಹರಿಕಾರರು



**■ವಿಜಯಸಾಕ್ಷಿ ಸುದ್ದಿ, ಲಕ್ಮೇಶ್ವರ**

ಭಾರತದಲ್ಲಿ ಬೇರೂರಿದ್ದ ಜಾತಿ ವ್ಯವಸ್ಥೆಯ ವಿರುದ್ಧ ಧ್ವನಿ ಎತ್ತಿದ ಭಾರತದ ಸಂವಿಧಾನದ ಪಿತಾಮಹ ಡಾ. ಬಿ.ಆರ್ ಅಂಬೇಡ್ಕರ ಅವರು ಸರ್ವ ಜನಾಂಗದ ಏಳಿಗೆ, ಸಮಾನತೆ, ಸ್ವಾತಂತ್ರಕ್ಕಾಗಿ ತಮ್ಮನ್ನೇ ಸಮರ್ಪಿಸಿಕೊಂಡಿದ್ದರು ಎಂದು ಲಕ್ಮೇಶ್ವರ ತಾಲೂಕು ವಕೀಲರ ಸಂಘದ ಅಧ್ಯಕ್ಷ ಬಸವರಾಜ ಬಾಳೇಶ್ವರಮಠ ಹೇಳಿದರು.

ಅವರು ಲಕ್ಮೇಶ್ವರ ನ್ಯಾಯಾಲಯದಲ್ಲಿ ನಡೆದ ಡಾ. ಬಿ.ಆರ್. ಅಂಬೇಡ್ಕರ್ ಜಯಂತಿ ಕಾರ್ಯಕ್ರಮದಲ್ಲಿ ಅವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಮಾತನಾಡಿದರು.

ಡಾ. ಅಂಬೇಡ್ಕರರು ಸಮಾಜದಲ್ಲಿ ತುಳಿತಕ್ಕೆ ಒಳಗಾದವರಿಗೆ ನ್ಯಾಯ ಒದಗಿಸಿ ಸಮಾನತೆಯ ಹರಿಕಾರರಾದರು. ಶ್ರೇಷ್ಠ ಸಂವಿಧಾನವನ್ನು ಭಾರತಕ್ಕೆ ರೂಪಿಸಿಕೊಟ್ಟ ಸಂವಿಧಾನ ಶಿಲ್ಪಿ, ಸಾಮಾಜಿಕ ನ್ಯಾಯ ಮತ್ತು ಸಮಾನತೆಗಾಗಿ ತಮ್ಮ ಬದುಕನ್ನೇ ಮುಡಿಪಾಗಿಟ್ಟಿದ್ದರು ಎಂದು ಹೇಳಿದರು.

ಈ ಸಂದರ್ಭದಲ್ಲಿ ವಕೀಲರ ಸಂಘದ ಕಾರ್ಯದರ್ಶಿ ವಿಠ್ಠಲ ನಾಯಕ, ಬಿ.ಎಸ್. ಪಾಟೀಲ, ಎನ್.ಎಂ. ಗದಗ, ಬಿ.ಎಸ್. ಘೋಂಗಡಿ, ವಿ.ಎಸ್. ಪಶುಪತಿಹಾಳ, ಎಸ್.ಎಸ್. ಶೆಟ್ಟರ, ಐ.ಜಿ. ಹುಲಬಜಾರ, ಎಸ್.ಆರ್. ಅತ್ತಿಗೇರಿ, ಆರ್.ಎಸ್. ಮುದಗಲ್, ವಿ.ಎಮ್. ಹುಡೇದಮನಿ, ಬಿ.ಎನ್. ಸಂಶಿ, ಎನ್.ಐ. ಸೊರಟೂರ ಸೇರಿದಂತೆ ವಕೀಲರು, ಸಂಘದ ಸದಸ್ಯರು ಇದ್ದರು.

# ಹಾವೇರಿ ಲೋಕಸಭಾ ಕ್ಷೇತ್ರ: ಎರಡನೇ ದಿನ 9 ನಾಮಪತ್ರ ಸಲ್ಲಿಕೆ

**■ವಿಜಯಸಾಕ್ಷಿ ಸುದ್ದಿ, ಹಾವೇರಿ**

ಲೋಕಸಭಾ ಸಾರ್ವತ್ರಿಕ ಚುನಾವಣೆಗೆ 10–ಹಾವೇರಿ ಲೋಕಸಭಾ ಕ್ಷೇತ್ರದಿಂದ ಎರಡನೇ ದಿನ ಏಳು ಅಭ್ಯರ್ಥಿಗಳಿಂದ ಒಂಭತ್ತು ನಾಮಪತ್ರಗಳು ಸಲ್ಲಿಕೆಯಾಗಿವೆ. ಇದುವರೆಗೂ ಎಂಟು ಅಭ್ಯರ್ಥಿಗಳಿಂದ ಹತ್ತು ನಾಮಪತ್ರಗಳು ಸಲ್ಲಿಕೆಯಾಗಿವೆ. ಎಪ್ರಿಲ್ 19 ನಾಮಪತ್ರ ಸಲ್ಲಿಕೆಗೆ ಕೊನೆಯ ದಿನವಾಗಿದೆ. ಎಪ್ರಿಲ್ 20 ರಂದು ನಾಮಪತ್ರ ಪರಿಶೀಲನೆ ನಡೆಯಲಿದೆ. ಎಪ್ರಿಲ್ 22 ರಂದು ನಾಮಪತ್ರ ಹಿಂಪಡೆಯಲು ಕೊನೆಯ ದಿನವಾಗಿದೆ ಎಂದು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿ ರಘುನಂದನ್ ಮೂರ್ತಿ ತಿಳಿಸಿದ್ದಾರೆ.

ಸೋಮವಾರ ಜಿಲ್ಲಾಧಿಕಾರಿಗಳ ಕಚೇರಿ ಕೋರ್ಟ್ ಹಾಲ್‌ನಲ್ಲಿ ಭಾರತೀಯ ರಾಷ್ಟ್ರೀಯ ಕಾಂಗ್ರೆಸ್ ಅಭ್ಯರ್ಥಿಯಾಗಿ ಜಿ.ಜಿ.ಆನಂದಸ್ವಾಮಿ ಗಡ್ಡದೇವರಮಠ (ಒಂದು), ಭಾರತೀಯ ಜನತಾ ಪಾರ್ಟಿ ಅಭ್ಯರ್ಥಿಯಾಗಿ ಬಸವರಾಜ ಸೋಮಪ್ಪ ಬೊಮ್ಮಾಯಿ (ಎರಡು), ಉತ್ತಮ ಪ್ರಜಾಕೀಯ ಪಾರ್ಟಿ ಅಭ್ಯರ್ಥಿಯಾಗಿ ಸಚಿನಕುಮಾರ ಕರ್ಜೆಕಣ್ಣವರ್ (ಒಂದು), ಸೋಶಿಯಲಿಸ್ಟ್ ಯುನಿಟಿ ಸೆಂಟರ್ ಆಫ್ ಇಂಡಿಯಾ (ಕಮ್ಯುನಿಸ್ಟ್) ಅಭ್ಯರ್ಥಿಯಾಗಿ ಗಂಗಾಧರ ಸೋಮಣ್ಣ ಬಡಿಗೇರ (ಎರಡು), ಸೋಶಿಯಾಲಿಸ್ಟ್ ಪಾರ್ಟಿ (ಇಂಡಿಯಾ)ಅಭ್ಯರ್ಥಿಯಾಗಿ ಖಾಜಾಮೋಹಿದ್ದೀನ್ ಗುಡಗೇರಿ (ಒಂದು), ಕರ್ನಾಟಕ ರಾಷ್ಟ್ರ ಸಮಿತಿ ಅಭ್ಯರ್ಥಿಯಾಗಿ ತನು ಸಿ. ಯಾದವ್ (ಒಂದು) ಹಾಗೂ ಪಕ್ಷೇತರ ಅಭ್ಯರ್ಥಿಯಾಗಿ ಡಾ.ಗುರಪ್ಪ ಹೆಚ್ ಇಮ್ರಾಪೂರ (ಒಂದು) ನಾಮಪತ್ರ ಸಲ್ಲಿಸಿದ್ದಾರೆ.

ಈ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿ ಹಾಗೂ ಸಹಾಯಕ ಚುನಾವಣಾಧಿಕಾರಿ ಪೂಜಾರ ವೀರಮಲ್ಲಪ್ಪ ಉಪಸ್ಥಿತರಿದ್ದರು.

## ಗುಜರಾತ್: ಕೇಂದ್ರ ಸಚಿವರ ವಿರುದ್ಧ ಕ್ಷತ್ರಿಯರಿಂದ ಬೃಹತ್ ಪ್ರತಿಭಟನೆ

**■ವಿಜಯಸಾಕ್ಷಿ ಸುದ್ದಿ, ಗುಜರಾತ್**

ಬಿಜೆಪಿ ಹಿರಿಯ ಮುಖಂಡ ಹಾಗೂ ಕೇಂದ್ರ ಸಚಿವ ಪರ್ಷೋತ್ತಮ್ ರೂಪಲಾ ಅವರನ್ನು ಪಕ್ಷದ ಉಮೇದುವಾರಿಕೆಯಿಂದ ವಜಾ ಮಾಡುವಂತೆ ಆಗ್ರಹಿಸಿ ಗುಜರಾತ್‌ನ ರಾಜ್‌ಕೋಟ್‌ನಲ್ಲಿ ಕ್ಷತ್ರಿಯ ಸಮುದಾಯದ ಒಂದು ಲಕ್ಷಕ್ಕೂ ಅಧಿಕ ಜನರು ಬೃಹತ್ ಪ್ರತಿಭಟನಾ ಸಮಾವೇಶ ನಡೆಸಿದ್ದಾರೆ.

ಸಚಿವ ರೂಪಾಲಾ ವಿರುದ್ಧ ರಾಜ್‌ಕೋಟ್‌ನಲ್ಲಿ ಕ್ಷತ್ರಿಯ ಸಮುದಾಯ ನಡೆಸಿದ ಎರಡನೇ ಬೃಹತ್ ಸಮಾವೇಶ ಇದಾಗಿದೆ.

ಕ್ಷತ್ರಿಯ ರಾಜಮನೆತನದ ಕುಟುಂಬಗಳು ಬ್ರಿಟಿಷರೊಂದಿಗೆ ಹೊಂದಾಣಿಕೆ ಮಾಡಿಕೊಳ್ಳುತ್ತಿದ್ದರು ಮತ್ತು ಅವರ ಹೆಣ್ಣು ಮಕ್ಕಳನ್ನು ಬ್ರಿಟಿಷರಿಗೆ ಮದುವೆ ಮಾಡಿ ಕೊಡುತ್ತಿದ್ದರು ಎಂದು ಸಚಿವ ರೂಪಾಲ ಹೇಳಿಕೆ ನೀಡಿದ್ದರು. ಇದು ರಜಪೂರನ್ನು ಕೆರಳಿಸುವಂತೆ ಮಾಡಿದೆ.

ಭಾನುವಾರ, ಸಮುದಾಯದ ಮುಖಂಡರು ಪ್ರತಿಭಟನೆಯನ್ನು ತೀವ್ರಗೊಳಿಸುವುದಾಗಿ ಮತ್ತು ರೂಪಾಲಾ ಅವರ ನಾಮಪತ್ರವನ್ನು ಹಿಂಪಡೆಯದಿದ್ದರೆ, ಏಪ್ರಿಲ್ 19 ರ ನಂತರ ಅಹಮದಾಬಾದ್‌ನಲ್ಲಿ ಮತ್ತೊಂದು ಬೃಹತ್ ಸಮಾವೇಶ ನಡೆಸುವುದಾಗಿ ಘೋಷಿಸಿದ್ದಾರೆ.

"ರೂಪಾಲಾ ಅವರ ಉಮೇದುವಾರಿಕೆಯನ್ನು ಹಿಂಪಡೆಯಬೇಕು ಎನ್ನುವುದು ನಮ್ಮ ಬೇಡಿಕೆಯಾಗಿದೆ. ಈ ವಿಷಯದಲ್ಲಿ ನಾವು ದೃಢವಾಗಿ ನಿಂತಿದ್ದೇವೆ ಎಂದು ಕ್ಷತ್ರಿಯ ಸಮುದಾಯದ ಕೋರ್ ಕಮಿಟಿ ಸದಸ್ಯ ರಾಮಜುಭಾ ಜಡೇಜಾ ಸಭೆಯನ್ನು ಉದ್ದೇಶಿಸಿ ಹೇಳಿದ್ದಾರೆ.

## ಪ್ರಜಾಪ್ರಭುತ್ವವನ್ನು ನಾಶಪಡಿಸುತ್ತಿರುವ ಮೋದಿ, ಪುಟಿನ್ ನಡುವೆ ಯಾವುದೇ ವ್ಯತ್ಯಾಸವಿಲ್ಲ: ಶರದ್ ಪವಾರ್ ವಾಗ್ದಾಳಿ

**■ವಿಜಯಸಾಕ್ಷಿ ಸುದ್ದಿ, ಮಹಾರಾಷ್ಟ್ರ**

ಪ್ರಧಾನಿ ನರೇಂದ್ರ ಮೋದಿ ಪ್ರಜಾಪ್ರಭುತ್ವವನ್ನು ನಾಶಪಡಿಸುತ್ತಿದ್ದಾರೆ, ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಮತ್ತು ಮೋದಿ ನಡುವೆ ಯಾವುದೇ ವ್ಯತ್ಯಾಸವಿಲ್ಲ ಎಂದು ಎನ್‌ಸಿಪಿ ಮುಖ್ಯಸ್ಥ ಶರದ್ ಪವಾರ್ ಹೇಳಿದ್ದಾರೆ.

ಮಾಜಿ ಉಪಮುಖ್ಯಮಂತ್ರಿ ವಿಜಯಸಿಂಹ ಮೋಹಿತೆ ಪಾಟೀಲ್ ಅವರ ನಿವಾಸಕ್ಕೆ ಮಾಧಾ ಮತ್ತು ಸೊಲ್ಲಾಪುರ ಲೋಕಸಭಾ ಸ್ಥಾನಗಳ ಅಭ್ಯರ್ಥಿಗಳ ಬಗ್ಗೆ ಚರ್ಚಿಸಲು ಭೇಟಿ ನೀಡಿದ ವೇಳೆ ಸೋಲಾಪುರ ಜಿಲ್ಲೆಯ ಅಕ್ಲುಜ್‌ನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಎನ್‌ಸಿಪಿ ಮುಖ್ಯಸ್ಥ ಶರದ್ ಪವಾರ್, ಮೋದಿ ವಿರೋಧ ಪಕ್ಷದಿಂದ ಯಾರೂ ಆಯ್ಕೆಯಾಗಬೇಕೆಂದು ಬಯಸುವುದಿಲ್ಲ. ಪ್ರಧಾನಿಯ ಇಂತಹ ನಿಲುವು, ಅವರು ಮತ್ತು ರಷ್ಯಾದ ವ್ಲಾಡಿಮಿರ್ ಪುಟಿನ್ ನಡುವೆ ಯಾವುದೇ ವ್ಯತ್ಯಾಸವಿಲ್ಲ ಎಂಬುದನ್ನು ತೋರಿಸುತ್ತದೆ ಎಂದು ಹೇಳಿದ್ದಾರೆ.

# ಮೋದಿ ಸರಕಾರವನ್ನು ಬೆಂಬಲಿಸಿ



■ ವಿಜಯಸಾಕ್ಷಿ ಸುದ್ದಿ, ಗದಗ

ಈ ದೇಶದ ಅಭಿವೃದ್ಧಿಯಲ್ಲಿ ನಮ್ಮೆಲ್ಲರ ಪಾತ್ರ ಇದೆ. ದೇಶ ಬಲಿಷ್ಠವಾಗಬೇಕಾದರೆ ನಿಮ್ಮ ಮತ ವ್ಯರ್ಥವಾಗಬಾರದು. 400ಕ್ಕೂ ಹೆಚ್ಚು ಸ್ಥಾನಗಳಿಂದ ಮೋದಿ ಸರಕಾರವನ್ನು ಆಯ್ಕೆ ಮಾಡಿ ಬೆಂಬಲಿಸಿ ಎಂದು ಬಿಜೆಪಿ ಗದಗ ಜಿಲ್ಲಾ ಅಧ್ಯಕ್ಷ ರಾಜು ಕುರುಡಗಿ ಮನವಿ ಮಾಡಿದರು.

ಅವರು ಹಾವೇರಿ ಲೋಕಸಭಾ ಕ್ಷೇತ್ರದ ಅಭ್ಯರ್ಥಿ ಬಸವರಾಜ್ ಬೊಮ್ಮಾಯಿ ಅವರ ಚುನಾವಣಾ ಪ್ರಚಾರದಲ್ಲಿ ಮಾತನಾಡಿದರು.

ದೇಶದ ಉಜ್ವಲ ಭವಿಷ್ಯಕ್ಕಾಗಿ, ಭದ್ರತೆಗಾಗಿ, ಭಾರತವನ್ನು ಮತ್ತೊಮ್ಮೆ ಇಡೀ ವಿಶ್ವ ಬೆರಗಾಗಿ ನೋಡುವಂತೆ ಅಭಿವೃದ್ಧಿಪಡಿಸಲು ನರೇಂದ್ರ ಮೋದಿ ಅವರಿಗೆ ಮತ ನೀಡಬೇಕು ಎಂದು ಸಾರ್ವಜನಿಕರಲ್ಲಿ ಮನವಿ ಮಾಡಿದರು.

## ಸಂವಿಧಾನ ಬದಲಾವಣೆ ಕುರಿತು ಪ್ರಸ್ತಾಪಿಸಿದ ಮತ್ತೋರ್ವ ಬಿಜೆಪಿ ಸಂಸದ

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಲೋಕಸಭೆ ಚುನಾವಣೆ ಹೊಸ್ತಿಲಲ್ಲಿ ಬಿಜೆಪಿ ನಾಯಕರು ಸಂವಿಧಾನ ಬದಲಾವಣೆ ಕುರಿತು ಹೇಳಿಕೆಯನ್ನು ನೀಡುತ್ತಿದ್ದಾರೆ. ಈ ಹಿಂದೆ ಉತ್ತರ ಕನ್ನಡ ಸಂಸದ ಅನಂತ್ ಕುಮಾರ್ ಹೆಗಡೆ ಮತ್ತು ಬಿಜೆಪಿ ನಾಯಕಿ ಜ್ಯೋತಿ ಮಿರ್ಧಾ ಸಂವಿಧಾನ ಬದಲಾವಣೆಯ ಬಗ್ಗೆ ಹೇಳಿಕೆಯನ್ನು ನೀಡಿದ್ದರು. ಇದು ಬಿಜೆಪಿಯ ನೈಜ ಉದ್ದೇಶ ಮತ್ತು ಬಿಜೆಪಿ ಆರೆಸ್ಸೆಸ್‌ನ ಅಂತರಾಳ ಎಂದು ಪ್ರತಿಪಕ್ಷಗಳು ಆರೋಪಿಸಿದ್ದವು. ಬಿಜೆಪಿ ಪ್ರಣಾಳಿಕೆ ಬಗ್ಗೆ ಪ್ರತಿಕ್ರಿಯಿಸಿದ್ದ ಪ್ರತಿಪಕ್ಷಗಳ ನಾಯಕರು ಇದು ತೋರ್ಪಡಿಕೆಗೆ ಮಾತ್ರ, ಬಿಜೆಪಿಯ ನೈಜ ಉದ್ದೇಶ ಸಂವಿಧಾನ ಬದಲಾವಣೆ ಮತ್ತು ಪ್ರಜಾಪ್ರಭುತ್ವವನ್ನು ನಾಶ ಮಾಡುವುದು ಎಂದು ಟೀಕಿಸಿದ್ದರು.

### ಶುಭಗಳಿಗೆಯಲ್ಲಿ ನಾಮಪತ್ರ ಸಲ್ಲಿಸಿದ ಬಿಜೆಪಿ ಅಭ್ಯರ್ಥಿ ಬಸವರಾಜ ಬೊಮ್ಮಾಯಿ

# ನಮ್ಮ ಸಾಧನೆಯನ್ನೂ ತಿಳಿಸುತ್ತೇವೆ

■ ವಿಜಯಸಾಕ್ಷಿ ಸುದ್ದಿ, ಹಾವೇರಿ

ಈ ಚುನಾವಣೆಯಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರ ಹೆಸರಿನೊಂದಿಗೆ ಕೇಂದ್ರ ಸರ್ಕಾರ ಹಾಗೂ ನಮ್ಮ ಅವಧಿಯ ಸಾಧನೆಗಳನ್ನು ಜನರಿಗೆ ತಿಳಿಸುತ್ತೇವೆ ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಹಾವೇರಿ ಗದಗ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಬಸವರಾಜ ಬೊಮ್ಮಾಯಿ ಹೇಳಿದ್ದಾರೆ.

ಹಾವೇರಿಯಲ್ಲಿ ಚುನಾವಣಾ ನಾಮಪತ್ರ ಸಲ್ಲಿಸಿ ಮಾತನಾಡಿದ ಅವರು, ಇವತ್ತು ಒಳ್ಳೆಯ ಮುಹೂರ್ತ ಇದೆ. ಎರಡು ಸೆಟ್ ನಾಮಪತ್ರ ಸಲ್ಲಿಸಿದ್ದೇನೆ. ಏಪ್ರಿಲ್ 19ರಂದು ಬೃಹತ್ ಮೆರವಣಿಗೆಯೊಂದಿಗೆ ನಾಮಪತ್ರ ಸಲ್ಲಿಸುವೆ. ಅಂದು ನಮ್ಮ ನಾಯಕರಾದ ಯಡಿಯೂರಪ್ಪ, ಭೈರತಿ ಬಸವರಾಜ ಸೇರಿ ಹಲವು ನಾಯಕರು ಆಗಮಿಸಲಿದ್ದಾರೆ ಎಂದರಲ್ಲದೆ, ಅತಿ ಹೆಚ್ಚು ಮತಗಳ ಅಂತರಗಳಲ್ಲಿ ಗೆಲ್ಲುವ ವಿಶ್ವಾಸ ವ್ಯಕ್ತಪಡಿಸಿದರು.

ಕಾಂಗ್ರೆಸ್‌ನವರು ಕೇಂದ್ರದಲ್ಲಿ ಬಹುಮತ ಬರುತ್ತೇವೆ ಎಂದು ನೀಡುವ



ಹೇಳಿಕೆಗಳು ಹಾಸ್ಯಾಸ್ಪದವಾಗಿವೆ. ಬಹುಮತಕ್ಕೆ 272 ಸ್ಥಾನ ಬೇಕು. ಅಷ್ಟು ಸ್ಥಾನಗಳಿಗೆ ನಿಲ್ಲುವ ಶಕ್ತಿ ಇಲ್ಲದವರು ಸಲ್ಲದ ಮಾತನಾಡುತ್ತಿದ್ದಾರೆ ಎಂದು ಕಾಂಗ್ರೆಸ್ ವಿರುದ್ಧ ವಾಗ್ದಾಳಿ ನಡೆಸಿದರು.

ಕ್ಷೇತ್ರದಲ್ಲಿ ನೀರಾವರಿ ಸಾಧನೆ ಕುರಿತು ಕೇಳಿದ ಪ್ರಶ್ನೆಗೆ ಪ್ರತಿಕ್ರಿಯಿಸಿದ ಬೊಮ್ಮಾಯಿ, ತುಂಗಾ ಮೇಲ್ದಂಡೆ ಯೋಜನೆಯಲ್ಲಿ ಒಂದು ಲಕ್ಷ ಎಕರೆ ನೀರಾವರಿ ಮಾಡಿರುವುದು ಸಾಮಾನ್ಯದ ಮಾತಲ್ಲ. ಇದರಿಂದ ಹಾನಗಲ್, ಹಿರೆಕೆ-ರೂರು, ರಾಣೆಬೆನ್ನೂರು ತಾಲೂಕುಗಳಲ್ಲಿ ನೀರಾವರಿಯಾಗಿದೆ. ಈ ಕೆಲಸ ಸಾಧ್ಯವಿಲ್ಲ ಎಂದು ಹೇಳಿದ್ದರು. ಅದನ್ನು ಮಾಡಿ ತೋರಿಸಿದ್ದೇನೆ. ಶಿಗ್ಗಾಂವಿ ಕ್ಷೇತ್ರ ಬಿಟ್ಟು ಎಂಟು ಏತ ನೀರಾವರಿ ಯೋಜನೆ ಮಾಡಿದ್ದೇನೆ ಎಂದರು.

ಪ್ರಧಾನಿ ಮೋದಿ ಪ್ರಚಾರದ ಕುರಿತು ಕೇಳಿದ ಪ್ರಶ್ನೆಗೆ ಪ್ರತಿಕ್ರಿಯಿಸಿ, ಏಪ್ರಿಲ್ 25 ಅಥವಾ 26ರ ನಂತರ ಉತ್ತರ ಕರ್ನಾಟಕ ಭಾಗದಲ್ಲಿ ಪ್ರಧಾನಿ ನರೇಂದ್ರ ಮೋದಿಯವರು ಪ್ರವಾಸ ಮಾಡಲಿದ್ದು, ಎರಡು ಅಥವಾ ಮೂರು ಲೋಕಸಭೆಗೆ ಒಂದು ಕ್ಲಸ್ಟರ್ ಮಾಡಿದ್ದಾರೆ ಎಂದರು.

ನಟ ಪ್ರಕಾಶ್ ರೈ ಪ್ರಧಾನಿ ಮೋದಿ ಕುರಿತು ನೀಡಿರುವ ಹೇಳಿಕೆಗೆ ಪ್ರತಿಕ್ರಿಯಿಸಿದ ಅವರು, ಪ್ರಕಾಶ ರೈ ಯಾವಾಗ ಫೇಸ್ ರೀಡರ್ ಆದರು? ಮೋದಿಯವರು ವಿಶ್ವದ ನಾಯಕ. ಅವರು ನೋಡುವ ದೃಷ್ಟಿಕೋನ ಹಾಗಿದೆ ಎಂದು ಹೇಳಿದರು.

ನಾಮಪತ್ರ ಸಲ್ಲಿಕೆ ಸಂದರ್ಭದಲ್ಲಿ ಮಾಜಿ ಸಚಿವ ಬಿ.ಸಿ. ಪಾಟೀಲ್, ಶಾಸಕ ಡಾ. ಚಂದ್ರು ಲಮಾಣಿ, ಮಾಜಿ ಶಾಸಕ ವಿರೂಪಾಕ್ಷಪ್ಪ ಬಳ್ಳಾರಿ, ಅರುಣ್ ಕುಮಾರ್ ಪೂಜಾರಿ, ಶಿವರಾಜ ಸಜ್ಜನ್ ಹಾಗೂ ಬಿಜೆಪಿ ಮುಖಂಡ ಶಂಕರಣ್ಣ ಮಾಂತನವರ ಹಾಜರಿದ್ದರು.

ಈ ಚುನಾವಣೆಯಲ್ಲಿ ಬಿಜೆಪಿಯವರು ಕೇವಲ ಪ್ರಧಾನಿ ನರೇಂದ್ರ ಮೋದಿ ಹೆಸರು ಹೇಳುತ್ತಿದ್ದಾರೆ ಎಂಬ ಪ್ರತಿಪಕ್ಷಗಳ ಆರೋಪಕ್ಕೆ ತಿರುಗೇಟು ನೀಡಿದ ಬಸವರಾಜ ಬೊಮ್ಮಾಯಿ, ಇದು ಲೋಕಸಭಾ ಚುನಾವಣೆ, ರಾಷ್ಟ್ರದ ಚುನಾವಣೆ. ಮೋದಿಯವರ ಹೆಸರು ಹೇಳಲೇಬೇಕು, ಹೇಳುತ್ತೇವೆ. ಅದರೊಂದಿಗೆ ನಾವು ಮಾಡಿದ ಅಭಿವೃದ್ಧಿ ಕಾರ್ಯಗಳನ್ನೂ ತಿಳಿಸಿ ಮತ ಕೇಳುತ್ತೇವೆ ಎಂದರು.

# ಶಿಕ್ಷಣ, ಸಮಾನತೆಗಳು ಸಮಾಜೋನ್ನತಿಗೆ ಸಹಕಾರಿ

■ ವಿಜಯಸಾಕ್ಷಿ ಸುದ್ದಿ, ಗದಗ

ಡಾ. ಬಿ.ಆರ್. ಅಂಬೇಡ್ಕರರು ರಚಿಸಿದ ಭಾರತದ ಸಂವಿಧಾನದ ಫಲದಿಂದ ಇಂದು ನಾವು ಶೈಕ್ಷಣಿಕ, ಧಾರ್ಮಿಕ ಮತ್ತು ಸಾಮಾಜಿಕವಾಗಿ ಸುಖಮಯ ಜೀವನ ನಡೆಸುತ್ತಿದ್ದೇವೆ. ಅಂಬೇಡ್ಕರರು ತಮ್ಮ ಜೀವನದಲ್ಲಿ ಶಿಕ್ಷಣ ಪಡೆಯಲು ಅನುಭವಿಸಿದ ಕಷ್ಟ ಮತ್ತು ಸಮಾಜ ತಮಗೆ ತೋರಿದ ತಾರತಮ್ಯ, ದೌರ್ಜನ್ಯಗಳು ಮುಂದಿನ ಜನಾಂಗದವರು ಅನುಭವಿಸಬಾರದೆಂಬ ಹೋರಾಟಗಳಿಂದ ಜಯಗಳಿಸಿ ಇಡೀ ವಿಶ್ವಕ್ಕೆ ಮಾದರಿಯಾಗಿರುವ ಸಂವಿಧಾನ ರಚಿಸಿದರು ಎಂದು ಬಸವೇಶ್ವರ ಹಿರಿಯ ಪ್ರಾಥಮಿಕ ಶಾಲೆಯ ಮುಖ್ಯೋಪಾಧ್ಯಾಯ ಶಿವಾನಂದ ಗಿಡ್ಡಕೆಂಚಣ್ಣವರ ತಿಳಿಸಿದರು.



ಇಲ್ಲಿನ ಎಸ್‌ವಾಯ್ ಬಿಎಂಎಸ್ ಯೋಗ ಪಾಠಶಾಲೆಯ ಬಸವ ಯೋಗ ಕೇಂದ್ರ ಮತ್ತು ಶ್ರೀ ಜಗದ್ಗುರು ತೋಂಟದಾರ್ಯ ಜಾತ್ರಾ ಮಹೋತ್ಸವ ಸಮಿತಿ-2024 ಗದಗ ಇವರುಗಳ ಸಹಯೋಗದಲ್ಲಿ ಬೇಸಿಗೆ ರಜೆ ಪ್ರಯುಕ್ತ ಪ್ರಾಥಮಿಕ ಮತ್ತು ಪ್ರೌಢಶಾಲಾ ಮಕ್ಕಳಿಗಾಗಿ ನಡೆದಿರುವ ಸಂಸ್ಕೃತಿ-ಸಂಸ್ಕಾರ ಶಿಬಿರದಲ್ಲಿ ಡಾ. ಬಿ.ಆರ್. ಅಂಬೇಡ್ಕರ್ ಜಯಂತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಅಧ್ಯಕ್ಷತೆ ವಹಿಸಿದ ನಿವೃತ್ತ ಕೃಷಿ ವಿಜ್ಞಾನಿ ಡಾ. ಎಸ್.ಕೆ. ನಾಲತ್ವಾಡಮಠ ಮಾತನಾಡಿ, ಹಿರಿಯರಾದ ನಾವೆಲ್ಲರೂ ಅಂಬೇಡ್ಕರರ ತತ್ವಾದರ್ಶಗಳನ್ನು ಪರಿಪಾಲಿಸಿದರೆ ಕಿರಿಯರೂ ನಮ್ಮನ್ನು ಅನುಸರಿಸುವರು ಎಂದು ಹೇಳಿದರು.

ಶಿಬಿರಾರ್ಥಿಗಳಾದ ಸಿಮ್ರಾನ್ ನದಾಫ್, ಚಿನ್ಮಯಿ ಗೌಡರ, ನಿಧಿ ಕಟ್ಟಿಮನಿ, ಅನುಷ್ಕಾ ಹಿರೇಮಠ ಅಂಬೇಡ್ಕರರ ಕುರಿತು ಮಾತನಾಡಿದರು. ವೇದಿಕೆಯಲ್ಲಿ ನವೀನ ಪಲ್ಲೇದ, ಶಿಬಿರದ ಶಿಕ್ಷಕರಾದ ಎಸ್.ಎಂ. ಬುರಡಿ, ಸುನಂದಾ ಜ್ಯಾನೋಪಂತರ, ವೀಣಾ ಹಿರೇಮಠ ಉಪಸ್ಥಿತರಿದ್ದರು. ಶಿಬಿರಾರ್ಥಿಗಳಾದ ಅದಿತಿ ಹಿರೇಮಠ, ಸಾಹಿತ್ಯ ಜಾಧವ, ತ್ರಿಶಾ ಸಿ. ಪ್ರಾರ್ಥನೆ ಹೇಳಿದರು. ಶ್ರಾವಣಿ ಗುಡದೂರ ಸಂವಿಧಾನ ಪೀಠಿಕೆ ಪಠಣ ಮಾಡಿಸಿದರು. ಶಿಬಿರ ಸಂಯೋಜಕ ಕೆ.ಎಸ್. ಪಲ್ಲೇದ ಕಾರ್ಯಕ್ರಮ ನಿರೂಪಿಸಿದರು. ಎಸ್.ಎಂ. ಬುರಡಿ ವಂದಿಸಿದರು.

### ವಿಡಿಎಸ್ ಕ್ಲಾಸಿಕ್ ಶಾಲೆಯಲ್ಲಿ ಮಕ್ಕಳ ಬೇಸಿಗೆ ಶಿಬಿರ ಉದ್ಘಾಟನೆ

# ಬೇಸಿಗೆ ಶಿಬಿರಗಳಿಂದ ಮನೋವಿಕಾಸ



■ ವಿಜಯಸಾಕ್ಷಿ ಸುದ್ದಿ, ಗದಗ

ಬೇಸಿಗೆ ಶಿಬಿರ ಎಂದರೆ ಮಕ್ಕಳು ತಮ್ಮ ತಮ್ಮ ಪ್ರತಿಭೆಗಳನ್ನು ಹೊರಹಾಕಲು ಇರುವ ಒಂದು ವೇದಿಕೆ. ಬೇಸಿಗೆ ಶಿಬಿರಗಳಲ್ಲಿ ಮಕ್ಕಳ ವ್ಯಕ್ತಿತ್ವ ವಿಕಸನ ಮಾತ್ರವಲ್ಲ ಮನೋವಿಕಸನ ಕೂಡ ಆಗುತ್ತದೆ. ಪುಟ್ಟ ಮಕ್ಕಳು ವರ್ಷದ 10 ತಿಂಗಳು ಪಠ್ಯ-ಪುಸ್ತಕಕ್ಕೆ ಸೀಮಿತರಾಗುತ್ತಾರೆ. ಉಳಿದ 2 ತಿಂಗಳ ಬೇಸಿಗೆ ರಜೆಯಲ್ಲಿ ವೃಥಾ ಕಾಲ ಕಳೆಯುತ್ತಾರೆ, ಆದರೆ ಮಕ್ಕಳಿಗೆ ಇಂತಹ ಶಿಬಿರದ ಮೂಲಕ ವಿವಿಧ ರೀತಿಯ ಸೃಜನಾತ್ಮಕ ಚಟುವಟಿಕೆಗಳನ್ನು ಕಲಿಸಿಕೊಟ್ಟರೆ ಮುಂದೆ ಅವರು ಅಭ್ಯಾಸದ ಜೊತೆಗೆ ಪ್ರತಿಭಾವಂತರಾಗಿ ಹೊರಹೊಮ್ಮಲು ಅವಕಾಶ ದೊರೆಯುತ್ತದೆ ಎಂದು ಶ್ರೀನಿವಾಸ ಹುಯಿಲಗೋಳ ಅಭಿಪ್ರಾಯಪಟ್ಟರು.

ನಗರದ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ಶಿಕ್ಷಣ ಸಂಸ್ಥೆ ವಿದ್ಯಾದಾನ ಸಮಿತಿಯ ಕ್ಲಾಸಿಕ್ ಆಂಗ್ಲ ಮಾಧ್ಯಮ ಶಾಲೆಯಲ್ಲಿ ಬೇಸಿಗೆ ಶಿಬಿರದ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಡಾ. ಪವನ ಎಸ್. ಹುಯಿಲಗೋಳ ಮಾತನಾಡಿ, ಸ್ಪರ್ಧಾತ್ಮಕ ಯುಗದಲ್ಲಿ ಈಗಿನ ಮಕ್ಕಳು ಎಲ್ಲಾ ಕ್ಷೇತ್ರಗಳಲ್ಲಿ ತಿಳುವಳಿಕೆಗಳನ್ನು ಹೊಂದಿರಬೇಕು. ಪಠ್ಯದ ಜೊತೆಗೆ ಯೋಗ, ಕರಾಟೆ, ಸಂಗೀತ, ನಾಟಕ, ಚಿತ್ರಕಲೆ, ಮಣ್ಣಿನ ಮಾದರಿ ತಯಾರಿ-ಕೆ ಇವೇ ಮುಂತಾದ ಸೃಜನಾತ್ಮಕ ಚಟುವಟಿಕೆಗಳಲ್ಲಿ ವಿದ್ಯಾರ್ಥಿಗಳು ಆಸಕ್ತಿಯನ್ನು ಹೊಂದಲು 30 ದಿನಗಳ ಈ ವಿಶೇಷ ಶಿಬಿರವನ್ನು ಹಮ್ಮಿಕೊಳ್ಳಲಾಗಿದೆ ಎಂದರು.

ಶಾಲೆಯ ಶೈಕ್ಷಣಿಕ ಮಾರ್ಗದರ್ಶಕ ಪ್ರತೀಕ ಎಸ್. ಹುಯಿಲಗೋಳ ಮಾತನಾಡಿ, ಈ ಶಿಬಿರದಲ್ಲಿ ಭಾಗವಹಿಸಿದ ಮಕ್ಕಳು ಸಂಪನ್ಮೂಲ ವ್ಯಕ್ತಿಗಳು ಹೇಳಿಕೊಟ್ಟಿದ್ದನ್ನು ಏಕಾಗ್ರತೆಯಿಂದ ಕಲಿಯಬೇಕು ಎಂದರಲ್ಲದೆ, ಶಿಬಿರದ ರೀತಿ-ನಿಯಮಗಳನ್ನು ವಿವರಿಸಿ, ಶುಭ ಹಾರೈಸಿದರು.

ಕಾರ್ಯಕ್ರಮಕ್ಕೆ ಅತಿಥಿಗಳಾಗಿ ಆಗಮಿಸಿದ ಡಾ. ರಶ್ಮಿ ಪಿ.ಹುಯಿಲಗೋಳರು ಮಕ್ಕಳಿಗೆ ಸಿಹಿ ಹಂಚಿ, ಗುಲಾಬಿ ಹೂ ನೀಡಿ ಬೇಸಿಗೆ ಶಿಬಿರದ ಕಲಿಕೆಗೆ ಶುಭ ಹಾರೈಸಿದರು. ಶಾಲೆಯ ಮುಖ್ಯೋಪಾಧ್ಯಾಯ ಎಂ.ಆರ್. ಡೊಳ್ಳಿನ ಸ್ವಾಗತಿಸಿ ನಿರೂಪಿಸಿದರು. ಶಿಕ್ಷಕಿ ಸುಮಂಗಲಾ ಆಸಂಗಿ ವಂದಿಸಿದರು.

# ಬೆಳದಡಿ ತಾಂಡಾದಲ್ಲಿ ರಾಜ್ಯ ಮಟ್ಟದ ಕ್ರಿಕೆಟ್ ಪಂದ್ಯಾವಳಿ

■ ವಿಜಯಸಾಕ್ಷಿ ಸುದ್ದಿ, ಗದಗ

ಬೆಳದಡಿ ತಾಂಡಾದ ಶ್ರೀ ಸೇವಾಲಾಲ್ ಯುವಕ ಸಂಘ ಹಾಗೂ ವಿವಿಧ ಸಂಸ್ಥೆಗಳ ಆಶ್ರಯದಲ್ಲಿ ಸಂವಿದಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರರ ಜಯಂತಿಯ ಪ್ರಯುಕ್ತ ಬೆಳದಡಿ ತಾಂಡಾದಲ್ಲಿ ಆಯೋಜಿಸಿದ್ದ ರಾಜ್ಯ ಮಟ್ಟದ ಹಾರ್ಡ್ ಟೆನಿಸ್ ಬಾಲ್ ಕ್ರಿಕೆಟ್ ಪಂದ್ಯಾವಳಿಯನ್ನು ಯಲಿಶಿರುಂಜ ಜ್ಞಾನಯೋಗಾಶ್ರಮದ ಪೀಠಾಧಿಪತಿಗಳಾದ ಪೂಜ್ಯಶ್ರೀ ಬಸವ ಸಮರ್ಥ ಮಹಾಸ್ವಾಮಿಗಳು



ಉದ್ಘಾಟಿಸಿದರು.

ಸಮಾರಂಭದ ಅಧ್ಯಕ್ಷತೆಯನ್ನು ತಾಂಡಾದ ಮುಖಂಡ ಚಂದು ನಾಯಕ್, ಮುಖ್ಯ ಅತಿಥಿಗಳಾಗಿ ಕೆ.ಸಿ. ನಭಾಪುರ, ರವಿಕಾಂತ ಅಂಗಡಿ, ಸೋಮು ನಾಯಕ್, ಮನೋಹರ್ ಕಾರಭಾರಿ, ವೆಂಕಣ್ಣ ಪೂಜಾರ, ವಿಜಯ್ ಮಾಳಗಿಮನಿ, ಭೀಮಪ್ಪ ರಾಠೋಡ, ನಾರಾಯಣ್ ಪವಾರ, ಈಶ್ವರ್ ಹೊಸಮನಿ, ಲಾಲಪ್ಪಾ ಪೂಜಾರ್, ಲಕ್ಷ್ಮಣ ಚವ್ಹಾಣ, ಮೋತಿಲಾಲ್ ಪೂಜಾರ, ಮಾಂತೇಶ್ ಚವ್ಹಾಣ, ನಾರಾಯಣ್ ನಾಯಕ್, ಗೋವಿಂದ ಡೋಣಿ, ಮಂಜುನಾಥ ಪೂಜಾರ, ಸಂತೋಷ ನಾಯಕ, ಠಾಕಪ್ಪ ಚವ್ಹಾಣ, ಅರ್ಜುನ ನಾಯಕ, ಜಗದೀಶ್ ಹಡಗಲಿ, ಲೋಕಪ್ಪ ತುಳಸಿಮಣಿ, ಗೇಮಪ್ಪ ಪೂಜಾರ, ಚಂದಪ್ಪ ನಾಯಕ, ಠಾಕ್ರಪ್ಪ, ಕಪಿಲ್ ಪೂಜಾರ, ವೆಂಕಟೇಶ ಪೂಜಾರ, ರಾಮು ಚವ್ಹಾಣ, ಸಂಜೀವ ನಾಯಕ, ಪಾಂಡು ರಾಠೋಡ, ಪ್ರವೀಣ ಪವಾರ ಮುಂತಾದವರು ಉಪಸ್ಥಿತರಿದ್ದರು. ಪಾಂಡು ಚವ್ಹಾಣ ಪ್ರಾಸ್ತಾವಿಕ ನುಡಿಗಳನ್ನಾಡಿದರು. ಗುಂಡಪ್ಪ ನಾಯಕ ಸ್ವಾಗತಿಸಿದರು. ಹೇಮಂತ್ ಬೇವಿನಕಟ್ಟಿ ನಿರೂಪಿಸಿದರು. ರಮೇಶ ಚವ್ಹಾಣ ವಂದಿಸಿದರು.

# ಸಂವಿಧಾನದಡಿಯಲ್ಲಿ ಬದುಕು ಸಾಗಿಸಿ



■ ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಡಾ. ಬಿ.ಆರ್. ಅಂಬೇಡ್ಕರರು ಹಿಂದುಳಿದ ವರ್ಗದ, ದೀನ-ದಲಿತರ ಅಭಿವೃದ್ಧಿಯ ಪಿತಾಮಹರಾಗಿದ್ದಾರೆ. ಸಮಾಜದ ಓರೆ-ಕೋರೆಗಳನ್ನು ತಿದ್ದಿ, ಸಮಸಮಾಜ ನಿರ್ಮಾಣಕ್ಕೆ ಡಾ. ಅಂಬೇಡ್ಕರರ ಕೊಡುಗೆ ಅಪಾರ ಎಂದು ಶಿರಹಟ್ಟಿ ಬಿಜೆಪಿ ನಗರ ಘಟಕದ ಅಧ್ಯಕ್ಷ ನಾಗರಾಜ ಲಕ್ಕುಂಡಿ ಹೇಳಿದರು.

ಅವರು ಶಿರಹಟ್ಟಿ ನಗರದಲ್ಲಿ ಭಾರತೀಯ ಜನತಾ ಪಾರ್ಟಿ ನೇತೃತ್ವದಲ್ಲಿ ಶಾಸಕ ಡಾ. ಚಂದ್ರು ಲಮಾಣಿ ನಿವಾಸದಲ್ಲಿ ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರರ ಜಯಂತ್ಯುತ್ಸವ ಕಾರ್ಯಕ್ರಮದಲ್ಲಿ ಅಂಬೇಡ್ಕರರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಮಾತನಾಡಿದರು.

ಅಂಬೇಡ್ಕರರರ ಆದರ್ಶಗಳು ಸರ್ವಕಾಲಕ್ಕೂ, ಸರ್ವ ಜನಾಂಗಕ್ಕೂ ಸ್ಪೂರ್ತಿದಾಯಕವಾಗಿದ್ದು, ಇವುಗಳನ್ನು ಪ್ರತಿಯೊಬ್ಬರೂ ತಮ್ಮ ಜೀವನದಲ್ಲಿ ಅಳವಡಿಸಿಕೊಂಡು ಸಂವಿಧಾನದಡಿಯಲ್ಲಿ ಬದುಕನ್ನು ಸಾಗಿಸಬೇಕೆಂದು ಹೇಳಿದರು.


ಈ ಸಂದರ್ಭದಲ್ಲಿ ಪಕ್ಷದ ಪ್ರಮುಖರಾದ ಬಸವರಾಜ ವಡವಿ, ಪರಶುರಾಮ ಡೊಂಕಬಳ್ಳಿ, ಯಲ್ಲಪ್ಪ ಇಂಗಳಗಿ, ಅನಿಲ ಪಾಚಾಪುರ, ಗೌತಮ ಕಪ್ಪತನವರ, ಅಕ್ಬರ್ ಸಾಬ್ ಯಾದಗಿರಿ, ಮಲ್ಲೇಶ್ ಕಬಾಡಿ, ಮಮ್ಮದ್ ಕುದ್ರಿ, ಶರಣಪ್ಪ ಹರ್ತಿ, ಶ್ರೀನಿವಾಸ ಬಾರ್ಬರ, ಶಿವು ಹಿರೇಮಠ, ಮಂಜುನಾಥ್ ರೆಡ್ಡಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ಯುವಕರು ಸಮಾಜದ ಅಂಕು-ಡೊಂಕುಗಳನ್ನು ತಿದ್ದಬೇಕು

■ ವಿಜಯಸಾಕ್ಷಿ ಸುದ್ದಿ, ಮುಂಡರಗಿ

ಕಾನೂನು ತಜ್ಞರಾಗಿ, ಸಾಮಾಜಿಕ ಕಾರ್ಯಕರ್ತರಾಗಿ, ಹೋರಾಟಗಾರರಾಗಿ ಅತ್ಯುತ್ತಮವಾಗಿ ಕಾರ್ಯ ನಿರ್ವಹಿಸುವುದರೊಂದಿಗೆ ಇಡೀ ಜಗತ್ತಿನಲ್ಲಿ ಅತ್ಯಂತ ಶ್ರೇಷ್ಠವಾದ ಸಂವಿಧಾನವನ್ನು ಈ ದೇಶಕ್ಕೆ ನೀಡಿದ ಕೀರ್ತಿ ಡಾ. ಬಿ.ಆರ್. ಅಂಬೇಡ್ಕರ್ ಅವರಿಗೆ ಸಲ್ಲುತ್ತದೆ ಎಂದು ಸಾಮಾಜಿಕ ಕಾರ್ಯಕರ್ತ ಅಡಿವೆಪ್ಪ ಛಲವಾದಿ ಹೇಳಿದರು.

ಡಾ. ಬಿ.ಆರ್. ಅಂಬೇಡ್ಕರ್ ನೋಂದಾಯಿತ ಕಟ್ಟಡ ಹಾಗೂ ಇತರೆ ನಿರ್ಮಾಣ ಕಾರ್ಮಿಕರ ಸಂಘಟನೆ ವತಿಯಿಂದ ಆಯೋಜಿಸಲಾಗಿದ್ದ ಡಾ. ಬಿ.ಆರ್. ಅಂಬೇಡ್ಕರ್ ಅವರ ಜಯಂತ್ಯುತ್ಸವ, ಮಾಜಿ ಉಪ ಪ್ರಧಾನಿ ಬಾಬು ಜಗಜೀವನರಾಂ ಮತ್ತು ಮಹಾತ್ಮ ಜ್ಯೋತಿಬಾ ಫುಲೆ



ಅವರ ಜಯಂತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಯುವಕರು ಶಿಕ್ಷಣವಂತರಾಗಿ ಸಮಾಜದ ಅಂಕು-ಡೊಂಕುಗಳನ್ನು ತಿದ್ದುವ ಕೆಲಸ ಮಾಡಬೇಕು. ಇಂತಹ ನಾಯಕರ ತತ್ವ-ಸಿದ್ಧಾಂತಗಳನ್ನು ಜೀವನದಲ್ಲಿ ಅಳವಡಿಸಿಕೊಂಡು ಮುನ್ನಡೆಯಬೇಕು ಎಂದು ಕಿವಿಮಾತು ಹೇಳಿದರು.

ಪಿಯುಸಿ ಪರೀಕ್ಷೆಯಲ್ಲಿ ಉತ್ತೀರ್ಣರಾದ ವಿದ್ಯಾರ್ಥಿಗಳಾದ ಮುತ್ತು ಚನ್ನದಾಸರ, ವಿನಾಯಕ ಗಿರೀಶ್ ಕಟ್ಟಿಮನಿ, ಕೋಟೇಶ ಚಲವಾದಿ, ಮುಜುಮಿಲ್ ಸುಂಕದ, ಹುಸೇನ್ ಇಟಗಿ, ಮಧು ಪೂಜಾರ್, ಚನ್ನವೀರಗೌಡ ಪಾಟೀಲ್, ಜಗದೀಶ್ ಭಜಂತ್ರಿ ಇವರನ್ನು ಸನ್ಮಾನಿಸಿ ಗೌರವಿಸಲಾಯಿತು.

ಈ ಸಂದರ್ಭದಲ್ಲಿ ಫಕ್ರುಸಾಬ ಹಾರೋಗೇರಿ, ಮಂಜುನಾಥ ಕಟ್ಟಿಮನಿ, ಮಂಜುನಾಥ ಮುಕ್ಕೆ, ಸುಪುತ್ರಪ್ಪ ಭಜಂತ್ರಿ, ಯಮನೂರಪ್ಪ ಚಲವಾದಿ, ದಸ್ತಿಗೀರಸಾಬ ಹೊಸಮನಿ, ವಿನೋದ್ ವಡ್ಡರ್, ಯಲ್ಲಪ್ಪ ಬೂದಿಹಾಳ, ಹನುಮಂತಪ್ಪ ಚೂರಿ, ಪ್ರಕಾಶ್ ದೊಡ್ಡಮನಿ, ವಿಜ್ಜಪ್ಪ ಕೊಳಲು, ಹಸನ್ ಅಳವಂಡಿ, ಎಲ್ಲಪ್ಪ ಭಜಂತ್ರಿ ಮುಂತಾದವರು ಉಪಸ್ಥಿತರಿದರು.

## ಯುವ ಜನತೆಗೆ ಭಾಷಣ ಸ್ಪರ್ಧೆ

**■ವಿಜಯಸಾಕ್ಷಿ ಸುದ್ದಿ, ಗದಗ**

ಸೇವಾ ಭಾರತಿ ಟ್ರಸ್ಟ್ ವತಿಯಿಂದ ಮತದಾನ ಜಾಗೃತಿಗಾಗಿ 18ರಿಂದ 21 ವಯೋಮಿತಿಯ ವಿದ್ಯಾರ್ಥಿ-ವಿದ್ಯಾರ್ಥಿನಿಯರಿಗಾಗಿ ಏ. 19ರಂದು ಸಂಜೆ 4 ಗಂಟೆಗೆ ಭಾಷಣ ಸ್ಪರ್ಧೆಯನ್ನು ಗದುಗಿನ ಮುಳಗುಂದ ನಾಕಾ ಬಳಿಯ ಶಿವಾಜಿ ಪಾರ್ಕ್ ಪಂಚಮುಖಿ ಮಾರುತಿ ದೇವಸ್ಥಾನದ ಹತ್ತಿರದ ಸೇವಾ ಚೇತನ ಕಟ್ಟಡದ ಅರುಣೋದಯ ವಿಶೇಷ ಅಗತ್ಯವುಳ್ಳ ಮಕ್ಕಳ ಶಾಲೆಯಲ್ಲಿ ಏರ್ಪಡಿಸಿದೆ.

ಮೊದಲ ಬಾರಿ ಮತದಾನ ಮಾಡುವ ಯುವ ಜನತೆ 'ಮತದಾನ ಏಕೆ ಮಾಡುವೆ, ಅಭ್ಯರ್ಥಿ ಹೊಂದಿರಬೇಕಾದ ಗುಣಗಳೇನು, ರಾಜಕೀಯ ಪಕ್ಷದ ಧ್ಯೇಯ ಹೇಗಿರಬೇಕು?' ವಿಷಯವಾಗಿ ಮಾತನಾಡಬೇಕು.

ರಾಜಕೀಯ ಪಕ್ಷದ ಹೆಸರು, ಅಭ್ಯರ್ಥಿಗಳ ಹೆಸರು, ಚಿಹ್ನೆ ಹೇಳುವಂತಿಲ್ಲ. ಟೋಪಿ ಧರಿಸಬಾರದು. ಗದಗ-ಬೆಟಗೇರಿ ಅವಳಿ ನಗರದ ವಿದ್ಯಾರ್ಥಿಗಳಿಗೆ ಮಾತ್ರ ಅವಕಾಶವಿದೆ. ಭಾಷಣ ಸ್ಪರ್ಧೆಯಲ್ಲಿ ಭಾಗವಹಿಸುವವರು 5 ನಿಮಿಷದೊಳಗೆ ಭಾಷಣ ಮುಗಿಸಬೇಕು. ಸ್ಪರ್ಧಾಳುಗಳು 3.45ಕ್ಕೆ ಹಾಜರಿರಬೇಕು. ವಿಜೇತರುಗಳಿಗೆ ಪ್ರಮಾಣ ಪತ್ರದೊಂದಿಗೆ ಬಹುಮಾನ ನೀಡಿ ಗೌರವಿಸಲಾಗುವದು.

ಭಾಗವಹಿಸಲು ಇಚ್ಛಿಸುವವರು ಹೆಸರು, ವಿಳಾಸ, ಆಧಾರ್ ಕಾರ್ಡ್ ಝುರಾಕ್ಸ್ ಪ್ರತಿ, ಸಂಪರ್ಕಿಸುವ ಫೋನ್ ನಂಬರ್ ಮಾಹಿತಿಯನ್ನು 8151887302 ನಂಬರ್‌ಗೆ ವಾಟ್ಸಾಪ್ ಮೂಲಕ ಕಳುಹಿಸಬೇಕು. ಮೊದಲು ಹೆಸರು ನೋಂದಣಿ ಮಾಡಿಕೊಂಡ 25 ಸ್ಪರ್ಧಾಳುಗಳನ್ನು ಮಾತ್ರ ಸ್ಪರ್ಧೆಗೆ ಪರಿಗಣಿಸಲಾಗುವದು ಎಂದು ಸೇವಾ ಭಾರತಿ ಟ್ರಸ್ಟ್ ಪ್ರಕಟಣೆ ತಿಳಿಸಿದೆ.

### ಸಚಿವ ಎಚ್.ಕೆ. ಪಾಟೀಲ ಸಮ್ಮುಖದಲ್ಲಿ ಕಾಂಗ್ರೆಸ್ ಸೇರ್ಪಡೆಗೊಂಡ ಗುರುನಾಥ ದಾನಪ್ಪನವರ

# ಕ್ಷೇತ್ರದಲ್ಲಿ ಪಕ್ಷದ ಗೆಲುವಿಗಾಗಿ ಶ್ರಮಿಸುವೆ

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ದಲಿತ ಸಮಾಜದ ಪ್ರಬಲ ಮುಖಂಡ, ಬಿಜೆಪಿಯ ಹಿರಿಯ ಮುಖಂಡ ಗುರುನಾಥ ದಾನಪ್ಪನವರ ಸೋಮವಾರ ಗದಗನಲ್ಲಿ ಸಚಿವ ಎಚ್.ಕೆ. ಪಾಟೀಲರ ಸಮ್ಮುಖದಲ್ಲಿ ಕಾಂಗ್ರೆಸ್ ಪಕ್ಷವನ್ನು ಸೇರ್ಪಡೆಗೊಂಡಿದ್ದಾರೆ.

ರವಿವಾರ ಲಕ್ಷ್ಮೇಶ್ವರದಲ್ಲಿ ಪತ್ರಿಕಾಗೋಷ್ಠಿ ನಡೆಸಿ ಬಿಜೆಪಿ ಮುಖಂಡರ ನಡೆಯಿಂದ ಬೇಸತ್ತು ಪಕ್ಷಕ್ಕೆ ರಾಜೀನಾಮೆ ನೀಡುತ್ತಿದ್ದು, ಶೀಘ್ರದಲ್ಲಿಯೇ ಕಾರ್ಯಕರ್ತರೊಂದಿಗೆ ಚರ್ಚಿಸಿ ಮುಂದಿನ ನಿರ್ಧಾರ ಪ್ರಕಟಿಸುವದಾಗಿ ಹೇಳಿದ್ದರು. ಸೋಮವಾರ ದಿಢೀರನೆ ಗದಗ ಕಾಂಗ್ರೆಸ್ ಕಚೇರಿಯಲ್ಲಿ ಪ್ರತ್ಯಕ್ಷರಾಗಿ, ಕಾಂಗ್ರೆಸ್ ಪಕ್ಷ ಸೇರ್ಪಡೆಗೊಂಡರು. ಸಚಿವ ಎಚ್.ಕೆ. ಪಾಟೀಲರು ದಾನಪ್ಪನವರ ಅವರನ್ನು ಪಕ್ಷದ ಶಾಲು, ಮಾಲೆ ಹಾಕಿ ಪಕ್ಷಕ್ಕೆ ಸ್ವಾಗತಿಸಿದರು.

ಈ ಸಮಯದಲ್ಲಿ ಮಾತನಾಡಿದ ಸಚಿವ ಎಚ್.ಕೆ. ಪಾಟೀಲ, ಗುರುನಾಥ ದಾನಪ್ಪನವರ ಬಿಜೆಪಿಯ ತತ್ವ-ಸಿದ್ದಾಂತ, ಧೋರಣೆಯಿಂದ ಬೇಸತ್ತು ಕಾಂಗ್ರೆಸ್ ಪಕ್ಷಕ್ಕೆ ಸೇರ್ಪಡೆಯಾಗುತ್ತಿರುವದು ಶಿರಹಟ್ಟಿ ಸೇರಿದಂತೆ ಈ ಭಾಗಕ್ಕೆ ದೊಡ್ಡ ಶಕ್ತಿ ಬಂದಂತಾಗಿದೆ. ಕಾಂಗ್ರೆಸ್ ಪಕ್ಷ ಎಲ್ಲರನ್ನೂ ಪ್ರೀತಿ, ವಿಶ್ವಾಸದಿಂದ ಕಾಣುತ್ತದೆ. ಪಕ್ಷ ಸಂಘಟನೆಯಲ್ಲಿ ಅವರು ತೊಡಗಿಸಿಕೊಂಡು ಉತ್ತಮವಾಗಿ ಕೆಲಸ ನಿರ್ವಹಿಸುವಲ್ಲಿ ಯಾವುದೇ ಸಂಶಯವಿಲ್ಲ. ಹಾವೇರಿ-ಗದಗ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಆನಂದಸ್ವಾಮಿ ಗಡ್ಡದೇವರಮಠ ಅವರ ಗೆಲುವಿಗೆ ಇಂದಿನಿಂದಲೇ ಅವರು ಕಾರ್ಯನಿರ್ವಹಿಸಲಿ. ಇಂತಹ ಅನೇಕ ಪ್ರಮುಖ ಮುಖಂಡರು ಈ ಭಾಗದಲ್ಲಿ ಕಾಂಗ್ರೆಸ್‌ಗೆ ಸೇರ್ಪಡೆಯಾಗಲಿದ್ದಾರೆ ಎಂದು ನುಡಿದರು.



ಪಕ್ಷ ಸೇರ್ಪಡೆಗೊಂಡ ಹಿರಿಯ ಮುಖಂಡ ಗುರುನಾಥ ದಾನಪ್ಪನವರ ಮಾತನಾಡಿ, ಶಿರಹಟ್ಟಿ ವಿಧಾನಸಭಾ ಕ್ಷೇತ್ರದಲ್ಲಿ ಕಳೆದೊಂದು ವರ್ಷದಿಂದ ಅನೇಕ ನಿಷ್ಠಾವಂತ ಕಾರ್ಯಕರ್ತರ ಬಗ್ಗೆ ನಿರ್ಲಕ್ಷ್ಯ ಧೋರಣೆಯನ್ನು ಜಿಲ್ಲಾ ಹಾಗೂ ಮಂಡಳ ಘಟಕದವರು ಮಾಡುತ್ತಿದ್ದಾರೆ. ಇವರ ನಡೆಯಿಂದ ಬೇಸತ್ತು ಬಿಜೆಪಿಗೆ ರಾಜೀನಾಮೆ ನೀಡಿದ್ದೇನೆ. ಬಿಜೆಪಿ ಮಂಡಳ, ನಗರ, ಜಿಲ್ಲಾ ಘಟಕಗಳು ಸೇರಿದಂತೆ ಪಕ್ಷದ ಯಾವುದೇ ಪದಾಧಿಕಾರಿಗಳ ಆಯ್ಕೆಯಲ್ಲಿ ನಮ್ಮ ಕಾರ್ಯಕರ್ತರು ಎನ್ನುವ ಉದ್ದೇಶದಿಂದ ಅವಕಾಶ ನೀಡದಿರುವದು ಹಾಗೂ ಒಂದು ವರ್ಷದಿಂದ ಪಕ್ಷದ ಯಾವುದೇ ಬೈಠಕ್‌ಗಳಿಗೆ, ಸಭೆಗಳಿಗೆ ನನ್ನನ್ನು ಆಹ್ವಾನಿಸದೆ ಅವಮಾನ ಮಾಡಿದ್ದಾರೆ ಎಂದು ಆರೋಪಿಸಿದರು.

> ಬಿಜೆಪಿಯ ಧೋರಣೆಯಿಂದ ಬೇಸತ್ತು ಪಕ್ಷವನ್ನು ತ್ಯಜಿಸಿದ್ದೇನೆ. ಅಲ್ಲದೆ ಕ್ಷೇತ್ರ ವ್ಯಾಪ್ತಿಯಲ್ಲಿ ಕಾಂಗ್ರೆಸ್ ಪಕ್ಷದ ಸಂಘಟನೆ ಮತ್ತು ಪಕ್ಷದ ಅನೇಕ ಸಿದ್ಧಾಂತಗಳನ್ನು ಒಪ್ಪಿ ಯಾವುದೇ ಶರತ್ತು ಇಲ್ಲದೆ ಕಾಂಗ್ರೆಸ್ ಪಕ್ಷಕ್ಕೆ ಸೇರ್ಪಡೆಗೊಳ್ಳುತ್ತಿದ್ದೇನೆ. ಹಾವೇರಿ ಲೋಕಸಭಾ ಕ್ಷೇತ್ರದಲ್ಲಿ ಪಕ್ಷದ ಗೆಲುವಿಗೆ ಶ್ರಮಿಸುವದಾಗಿ ಗುರುನಾಥ ದಾನಪ್ಪನವರ ಹೇಳಿದರು.

ಈ ಸಂದರ್ಭದಲ್ಲಿ ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ಸುಜಾತಾ ದೊಡ್ಡಮನಿ, ಮಾಜಿ ಶಾಸಕರಾದ ಡಿ.ಆರ್. ಪಾಟೀಲ, ಜಿ.ಎಸ್. ಗಡ್ಡದೇವರಮಠ, ರಾಮಣ್ಣ ಲಮಾಣಿ, ರಾಮಕೃಷ್ಣ ದೊಡ್ಡಮನಿ, ಸಿದ್ದಲಿಂಗೇಶ ಪಾಟೀಲ, ರಾಜಣ್ಣ ಕುಂಬಿ, ತಿಪ್ಪಣ್ಣ ಸಂಶಿ, ಫಕ್ಕೀರೇಶ ಮ್ಯಾಟಣ್ಣವರ, ರಾಮು ಅಡಗಿಮನಿ ಮುಂತಾದವರಿದ್ದರು.

## ಮಾರನಬಸರಿಯಲ್ಲಿ ಅದ್ದೂರಿ ಜಾತ್ರಾ ಮಹೋತ್ಸವ



**■ವಿಜಯಸಾಕ್ಷಿ ಸುದ್ದಿ, ರೋಣ**

ಸೌಹಾರ್ದತೆಯ ತವರು ಎಂದು ಖ್ಯಾತಿ ಪಡೆದಿರುವ ಮಾರನಬಸರಿ ಗ್ರಾಮದಲ್ಲಿ ಗ್ರಾಮ ದೇವತೆಯ ಜಾತ್ರಾ ಮಹೋತ್ಸವವು ಸಾವಿರಾರು ಭಕ್ತರ ಸಂಗಮದಲ್ಲಿ ಅದ್ದೂರಿಯಾಗಿ ಜರುಗಿತು.

ಸೋಮವಾರ ಬೆಳಗಿನ ಜಾವ ದೇವಸ್ಥಾನದಲ್ಲಿ ದೇವತೆಗೆ ವಿಶೇಷ ಪೂಜಾ ಕಾರ್ಯಗಳನ್ನು ನೆರವೇರಿಸುವ ಮೂಲಕ ಭಕ್ತರ ದರ್ಶನಕ್ಕೆ ಅಣಿಗೊಳಿಸಲಾಯಿತು. ನಂತರ ಗ್ರಾಮ ದೇವತೆಯು ಮಾರುತೇಶ್ವರನ ಸನ್ನಿಧಾನಕ್ಕೆ ತೆರಳಿ ಮರಳಿ ಬರುವ ಸಂಧರ್ಭದಲ್ಲಿ ಉಗ್ರ ರೂಪವನ್ನು ತಾಳುವ ಮೂಲಕ ಭಕ್ತರ ಮನೆಗೆ ತೆರಳಿ ದಂಡಿ ಹಾಗೂ ಸೀರೆಯನ್ನು ಮುಡಿಯುವದರೊಂದಿಗೆ ದಲಿತ ಕಾಲೋನಿಯಲ್ಲಿರುವ ದುರ್ಗಾದೇವಿಯ ದೇವಸ್ಥಾನಕ್ಕೆ ಆಗಮಿಸಿ ಭಕ್ತರಿಗೆ ದರ್ಶನಗೈದಳು.

ಕೆಲ ಗಂಟೆಗಳವರೆಗೆ ಗ್ರಾಮದಲ್ಲಿ ವಾಹನ ಸಂಚಾರವನ್ನು ನಿಷೇಧಿಸಲಾಗಿತ್ತು. ಗ್ರಾಮದೇವಿಯ ದರ್ಶನ ಪಡೆಯಲು ಸಾವಿರಾರು ಭಕ್ತರು ಕಾಲ್ನಡಿಗೆಯಲ್ಲಿ ಆಗಮಿಸಿದ್ದು ಜಾತ್ರಾ ಮಹೋತ್ಸವದ ವಿಶೇಷತೆಯಾಗಿತ್ತು.

ಗ್ರಾಮ ದೇವತೆಯ ಉಗ್ರ ರೂಪವನ್ನು ಕಂಡ ಸಾವಿರಾರು ಭಕ್ತರು ದೇವಿಯ ನಾಮ ಸ್ಮರಣೆಯನ್ನು ಮಾಡುತ್ತಾ ಜಯಘೋಷಗಳನ್ನು ಕೂಗಿ ದೇವಿ ಬರುವ ದಾರಿಯಲ್ಲಿ ನೀರು ಹಾಕುವ ಮೂಲಕ ಭಕ್ತಿ ಮೆರದರು. ದೇವಿಯು ಸಣ್ಣ ಮಸೂತಿ, ದೊಡ್ಡ ಮಸೂತಿಗಳಿಗೆ ಭೇಟಿ ನೀಡಿದ ಸಂಧರ್ಭದಲ್ಲಿ ಹಿಂದೂ-ಮುಸ್ಲಿಂ ಭಕ್ತರ ಭಕ್ತಿ ಇಮ್ಮಡಿಗೊಂಡಿತ್ತು.

ಗ್ರಾಮ ದೇವತೆಯು ದ್ವಾರ ಬಾಗಿಲ ಬಳಿ ಬರುತ್ತಿದ್ದಂತೆ ದೇವಿ ಊರಿನೊಳಗೆ ಹೊಗಲು ನಿರಾಕರಿಸಿ ದ್ವಾರ ಬಾಗಿಲದ ಬಳಿ ಗಂಟೆಗೂ ಹೆಚ್ಚು ಕಾಲ ನಿಂತಿದ್ದು ಭಕ್ತರ ಭಯಕ್ಕೆ ಕಾರಣವಾಗಿತ್ತು. ಬಳಿಕ ಭಕ್ತರು ದೇವಿಯ ಭಾವಚಿತ್ರಕ್ಕೆ ಹೂಮಾಲೆಯನ್ನು ಸಮರ್ಪಿಸಿ ಧನ್ಯತೆಯನ್ನು ಮೆರೆದಾಗ ದೇವಿ ಊರಿನೊಳಕ್ಕೆ ಪ್ರವೇಶಿಸಿದಳು.

### ಪತ್ರಿಕಾಗೋಷ್ಠಿಯಲ್ಲಿ ದಿಂಗಾಲೇಶ್ವರ ಶ್ರೀಗಳ ವಿರುದ್ಧ ಸಾಹಿತಿ ಬಸವರಾಜ ಸೂಳಿಭಾವಿ ಆರೋಪ

# ವಿರೋಧ ಮರೆಸಲು ಚುನಾವಣೆಯಲ್ಲಿ ಸ್ಪರ್ಧೆ

**■ವಿಜಯಸಾಕ್ಷಿ ಸುದ್ದಿ, ಗದಗ**

ದಿಂಗಾಲೇಶ್ವರ ಶ್ರೀಗಳು ಹುಬ್ಬಳ್ಳಿ ಮೂರು ಸಾವಿರ ಮಠದ ಪೀಠಾಧಿಪತಿಯಾಗಲು ವಿರೋಧಗಳಿದ್ದು, ಇದನ್ನು ತಣ್ಣಗಾಗಿಸಲು ಪ್ರಹ್ಲಾದ ಜೋಶಿ ವಿರುದ್ಧ ಸ್ವತಂತ್ರ ಅಭ್ಯರ್ಥಿಯಾಗಿ ಸ್ಪರ್ಧಿಸುವ ಕುತಂತ್ರ ನಡೆಸಿದ್ದಾರೆ ಎಂದು ಸಾಹಿತಿ ಬಸವರಾಜ ಸೂಳಿಭಾವಿ ಆರೋಪಿಸಿದರು.




ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು, ದಿಂಗಾಲೇಶ್ವರ ಸ್ವಾಮೀಜಿ ಶಿರಹಟ್ಟಿಯ ಭಾವೈಕ್ಯತೆಯ ಮಠಕ್ಕೆ ಕುತಂತ್ರದಿಂದಲೇ ರಾತ್ರೋರಾತ್ರಿ ಉತ್ತರಾಧಿಕಾರಿ ಆಗಿದ್ದಾರೆ. ಇಂಥದೇ ಕುತಂತ್ರ ನಡೆಸಿ ಮೂರು ಸಾವಿರ ಮಠದ ಪೀಠಾಧಿಪತಿಯಾಗಲು ಹವಣಿಸಿದರು. ಪ್ರಾರಂಭದಲ್ಲಿ ಬೆಂಬಲ ನೀಡಿದವರೂ ಇವರ ಕುತಂತ್ರ ಅರಿತು ವಿರೋಧ ವ್ಯಕ್ತಪಡಿಸಿದರು. ಆ ವಿರೋಧವನ್ನು ತಣ್ಣಗಾಗಿಸಲು ರಾಜಕೀಯ ನಾಟಕ ಆರಂಭಿಸಿದ್ದಾರೆ ಎಂದು ಆಪಾದಿಸಿದರು.

ಸ್ವಾಮಿತ್ವದ ಯಾವುದೇ ಲಕ್ಷಣ ಇಲ್ಲದ ದಿಂಗಾಲೇಶ್ವರ ಸ್ವಾಮೀಜಿ ಮಠ ಬಿಟ್ಟು ರಾಜ-ಕಾರಣ ಮಾಡಲಿ. ಇಲ್ಲವೇ ಜನರೇ ಮಠದಿಂದ ಹೊರಹಾಕುವ ಕಾಲ ಬಂದೀತು. ದಿಂಗಾಲೇಶ್ವ ಶ್ರೀಗಳು ಪ್ರಹ್ಲಾದ ಜೋಶಿ ಅವರಿಂದ ಲಿಂಗಾಯತರಿಗೆ ಅನ್ಯಾಯ ಆಗಿದೆ ಎನ್ನುತ್ತಾರೆ. ಆದರೆ ಯಾವ ರೀತಿ ಅನ್ಯಾಯ ಆಗಿದೆ ಎಂಬುದನ್ನು ಹೇಳುತ್ತಿಲ್ಲ. ಈ ಹಿಂದೆ ಲಿಂಗಾಯತ ಸ್ವತಂತ್ರ ಧರ್ಮ ಹೋರಾಟ ನಡೆದಾಗ ಅದನ್ನು ವಿರೋಧಿಸಿ ಸಮಾವೇಶ ಸಂಘಟಿಸಿದರು. ಆದರೆ ಈಗ ಅದೇ ಲಿಂಗಾಯತ ಹೆಸರಿನಲ್ಲಿ ರಾಜಕಾರಣ ಮಾಡುವಂತಾಗಿದೆ ಎಂದು ಆರೋಪಿಸಿದರು.

ದ್ವೇಷ ಬಿಡು ಪ್ರೀತಿ ಮಾಡು ಎನ್ನುವ ಸಂದೇಶ ಸಾರಿದ ಶಿರಹಟ್ಟಿ ಮಠದ ಉತ್ತರಾಧಿಕಾರಿಯಾಗಿ ಕೋಮುವಾದಿ ಬಿಜೆಪಿ ಪಕ್ಷದ ಪರವಾಗಿದ್ದಾರೆ. ಕೇವಲ ಪ್ರಹ್ಲಾದ್ ಜೋಶಿ ವಿರೋಧಿಸುವುದಕ್ಕಾಗಿ ಈ ರಾಜಕೀಯ ನಾಟಕ ಆರಂಭಿಸಿದ್ದಾರೆ. ಇಂಥವರಿಗೆ ಹುಬ್ಬಳ್ಳಿ-ಧಾರವಾಡ ಮತದಾರರು ಠೇವಣಿ ಸಿಗದಂತೆ ಮಾಡಬೇಕು ಎಂದು ಮನವಿ ಮಾಡಿದರು.

ಸುದ್ದಿಗೋಷ್ಠಿಯಲ್ಲಿ ಶೇಕಣ್ಣ ಕವಳಿಕಾಯಿ, ಶರೀಫ್ ಬಿಳೆಯಲಿ, ಅನಂತ ಕಟ್ಟಿಮನಿ, ಆನಂದ ಸಿಂಗಾಡಿ, ಮುತ್ತು ಬಿಳೆಯಲಿ ಇತರರು ಉಪಸ್ಥಿತರಿದ್ದರು.

### ಹಳ್ಳಿಯ ಹೆಣ್ಮಕ್ಕಳ ಬಗ್ಗೆ ವಿವಾದಾತ್ಮಕ ಹೇಳಿಕೆ: ಎಚ್.ಡಿ.ಕೆಗೆ ಮಹಿಳಾ ಆಯೋಗದಿಂದ ನೋಟೀಸ್

**■ವಿಜಯಸಾಕ್ಷಿ ಸುದ್ದಿ, ತುಮಕೂರು**



ತುರುವೇಕೆರೆಯಲ್ಲಿ ಚುನಾವಣಾ ಪ್ರಚಾರದಲ್ಲಿ ಮಾಜಿ ಸಿಎಂ ಎಚ್.ಡಿ.ಕುಮಾರಸ್ವಾಮಿ ಅವರು ಮಾತನಾಡುತ್ತಾ, ಕಾಂಗ್ರೆಸ್ ಸರ್ಕಾರದ ಉಚಿತ ಗ್ಯಾರಂಟಿ ಯೋಜನೆಗಳಿಂದ ಹಳ್ಳಿಯ ಹೆಣ್ಣು ಮಕ್ಕಳು ದಾರಿ ತಪ್ಪಿದ್ದಾರೆ ಎಂದು ಹೇಳಿ ವಿವಾದವನ್ನು ಸೃಷ್ಟಿಸಿದ್ದರು. ಹೇಳಿಕೆ ಬಗ್ಗೆ ವ್ಯಾಪಕವಾದ ವಿರೋಧ ವ್ಯಕ್ತವಾಗಿತ್ತು. ಇದೀಗ ಹೇಳಿಕೆಗೆ ಸಂಬಂಧಿಸಿ ರಾಜ್ಯ ಮಹಿಳಾ ಆಯೋಗ ಕುಮಾರಸ್ವಾಮಿಗೆ ನೋಟಿಸ್ ಜಾರಿ ಮಾಡಿದೆ.

ತುಮಕೂರಿನ ತುರುವೇಕೆರೆಯಲ್ಲಿ ಮೈತ್ರಿ ಅಭ್ಯರ್ಥಿ ವಿ.ಸೋಮಣ್ಣ ಪರ ಪ್ರಚಾರ ಕಾರ್ಯಕ್ರಮದಲ್ಲಿ ಮಾತನಾಡಿದ ಕುಮಾರಸ್ವಾಮಿ, ಗ್ಯಾರಂಟಿ ಯೋಜನೆಗಳನ್ನು ಟೀಕಿಸುವ ನೀಡುವ ಭರದಲ್ಲಿ ಹಳ್ಳಿಯ ಹೆಣ್ಣು ಮಕ್ಕಳ ಬಗ್ಗೆ ಲಘುವಾಗಿ ಮಾತನಾಡಿದ್ದಾರೆ.

ಜನರನ್ನು ಉದ್ದೇಶಿಸಿ ಮಾತನಾಡಿದ ಹೆಚ್‌ಡಿಕೆ "ಸ್ವಲ್ಪ ಗಮನ ಇಟ್ಟು ಎರಡು ಮಾತುಗಳನ್ನು ಕೇಳಿ. ಇವತ್ತಿನ ಕಾಂಗ್ರೆಸ್ ಸರ್ಕಾರ ಕಳೆದ ಚುನಾವಣೆಯಲ್ಲಿ ಐದು ಗ್ಯಾರಂಟಿಗಳನ್ನು ಘೋಷಣೆ ಮಾಡಿದ್ದರಿಂದ ನನ್ನ ಹಳ್ಳಿಯ ತಾಯಂದಿರು ಸ್ವಲ್ಪ ದಾರಿ ತಪ್ಪಿದ್ದಾರೆ. ಈ ರೀತಿ ಉಚಿತ ಯೋಜನೆ ಕೊಟ್ಟರೆ ಹಳ್ಳಿಯ ತಾಯಂದಿರ ಬದುಕು ಏನಾಗಬೇಕು? ಈ ಬಗ್ಗೆ ಎಲ್ಲರೂ ಯೋಚನೆ ಮಾಡಬೇಕಿದೆ. ನಿಮ್ಮ ಕುಟುಂಬದ ಬದುಕೇನಾಗಬೇಕು ಯೋಚನೆ ಮಾಡಬೇಕಿದೆ. ಅವರಿಗೆ ಐದು ಉಚಿತ ಗ್ಯಾರಂಟಿ ಬಿಟ್ಟು ಬೇರೆ ಏನೂ ಇಲ್ಲ" ಎಂದು ಟೀಕಿಸಿದ್ದಾರೆ.

## ತೋಂಟದಾರ್ಯ ಜಾತ್ರೆಯ ನಿಮಿತ್ತ ಷಟಸ್ಥಲ್ ಧ್ವಜಾರೋಹಣ

**■ವಿಜಯಸಾಕ್ಷಿ ಸುದ್ದಿ, ಗದಗ**

2024ನೇ ಸಾಲಿನ ಶ್ರೀ ಜಗದ್ಗುರು ತೋಂಟದಾರ್ಯ ಮಠದ ಜಾತ್ರಾ ಮಹೋತ್ಸವದ ಅಂಗವಾಗಿ ಸೋಮವಾರ ಮುಂಜಾನೆ ಪರಮಪೂಜ್ಯ ಶ್ರೀ ಜಗದ್ಗುರು ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು ಷಟ್‌ಸ್ಥಲ ಧ್ವಜಾರೋಹಣ ನೆರವೇರಿಸಿದರು.

ಜಾತ್ರಾ ಮಹೋತ್ಸವದ ಅಧ್ಯಕ್ಷ ಪ್ರೊ. ಕೆ.ಎಚ್. ಬೇಲೂರ, ಉಪಾಧ್ಯಕ್ಷ ಅಮರೇಶ ಚಾಗಿ, ಶ್ರೀದೇವಿ ಎಸ್.ಶೆಟ್ಟರ, ಶಿವಯ್ಯ ನಾಲತ್ವಾಡಮಠ, ಕಾರ್ಯದರ್ಶಿ ಪ್ರವೀಣ ವಾರಕರ, ಸಹ ಕಾರ್ಯದರ್ಶಿ ಗವಿಸಿದ್ದಪ್ಪ ಗಾಣಿಗೇರ, ಬರಕತಲಿ ಮುಲ್ಲಾ, ಚಂದ್ರಶೇಖರ ಇಟಗಿ, ಸಂಘಟನಾ ಕಾರ್ಯದರ್ಶಿ ತಿಮ್ಮರೆಡ್ಡಿ ಕೋನರೆಡ್ಡಿ, ಕೋಶಾಧ್ಯಕ್ಷ ವಿಶ್ವನಾಥ ಹಳ್ಳಿಕೇರಿ, ಸಹ ಕೋಶಾಧ್ಯಕ್ಷ ಅಜಯ ಮುನವಳ್ಳಿ, ಲಿಂಗಾಯತ ಪ್ರಗತಿಶೀಲ ಸಂಘದ ಅಧ್ಯಕ್ಷ ಶೇಖಣ್ಣ ಕಳಸಾಪೂರ, ದಾನಯ್ಯ ಗಣಾಚಾರಿ, ಮಾನ್ವಿ, ಮುರುಘರಾಜೇಂದ್ರ ಬಡ್ನಿ, ಬಸವರಾಜ ಹಿರೇಹಡಗಲಿ, ಎಂ.ಎಸ್. ಅಂಗಡಿ ಸೇರಿದಂತೆ ಶ್ರೀಮಠದ ಸದ್ಭಕ್ತರು ಉಪಸ್ಥಿತರಿದ್ದರು.



### ಕಾಂಗ್ರೆಸ್ ಅಭ್ಯರ್ಥಿಗಳ ಮತ್ತೊಂದು ಪಟ್ಟಿ ಪ್ರಕಟ: ಈಶಾನ್ಯ ದೆಹಲಿಯಿಂದ ಕಣಕ್ಕಿಳಿದ ಕನ್ಹಯ್ಯಾ ಕುಮಾರ್

**■ವಿಜಯಸಾಕ್ಷಿ ಸುದ್ದಿ, ನವದೆಹಲಿ**

ಲೋಕಸಭೆ ಚುನಾವಣೆಗೆ ಹತ್ತು ಅಭ್ಯರ್ಥಿಗಳ ಹೊಸ ಪಟ್ಟಿಯನ್ನು ಕಾಂಗ್ರೆಸ್ ಭಾನುವಾರ ಬಿಡುಗಡೆ ಮಾಡಿದೆ. ಪಕ್ಷವು ಈಶಾನ್ಯ ದೆಹಲಿಯಿಂದ ಕನ್ಹಯ್ಯಾ ಕುಮಾರ್ ಮತ್ತು ಜಲಂಧರ್‌ನಿಂದ ಪಂಜಾಬ್ ಮಾಜಿ ಮುಖ್ಯಮಂತ್ರಿ ಚರಂಜಿತ್ ಸಿಂಗ್ ಚನ್ನಿ ಅವರನ್ನು ಕಣಕ್ಕಿಳಿಸಿದೆ.

ದೆಹಲಿಯ ಜವಾಹರಲಾಲ್ ನೆಹರು ವಿಶ್ವವಿದ್ಯಾಲಯ(ಜೆಎನ್‌ಯು) ದ ವಿದ್ಯಾರ್ಥಿ ಸಂಘದ ಅಧ್ಯಕ್ಷರಾಗಿ ಸೇವೆ ಸಲ್ಲಿಸಿರುವ ಕನ್ಹಯ್ಯಾ ಕುಮಾರ್ (37) ಅವರು ಭೋಜ್‌ಪುರಿ ನಟ-ಗಾಯಕ ಮತ್ತು ಈಶಾನ್ಯ ದೆಹಲಿಯಿಂದ ಬಿಜೆಪಿ ಸಂಸದರಾಗಿರುವ ಮನೋಜ್ ತಿವಾರಿ ಅವರನ್ನು ಎದುರಿಸಲಿದ್ದಾರೆ. ಮೇ 25 ರಂದು ಮತದಾನ ನಡೆಯಲಿದೆ.

2019 ರ ಲೋಕಸಭೆ ಚುನಾವಣೆಯಲ್ಲಿ ಕನ್ಹಯ್ಯಾ ಕುಮಾರ್ ಅವರು ಬಿಹಾರದ ಬೇಗುಸರಾಯ್‌ನಿಂದ ಕಮ್ಯುನಿಸ್ಟ್ ಪಾರ್ಟಿ ಆಫ್ ಇಂಡಿಯಾ (ಸಿಪಿಐ) ಟಿಕೆಟ್‌ನಲ್ಲಿ ಸ್ಪರ್ಧಿಸಿದ್ದರು. ಇದರಲ್ಲಿ ಅವರು ಕೇಂದ್ರ ಸಚಿವ ಮತ್ತು ಭಾರತೀಯ ಜನತಾ ಪಕ್ಷದ ನಾಯಕ ಗಿರಿರಾಜ್ ಸಿಂಗ್ ವಿರುದ್ಧ ಸೋತಿದ್ದರು. ನಂತರ ಅವರು 2021ರಲ್ಲಿ ಕಾಂಗ್ರೆಸ್ ಸೇರಿದರು.

ಮನೋಜ್ ತಿವಾರಿ ಅವರು 2014ರ ಲೋಕಸಭೆ ಚುನಾವಣೆಯಲ್ಲಿ ಮಾಜಿ ಮುಖ್ಯಮಂತ್ರಿ ಶೀಲಾ ದೀಕ್ಷಿತ್ ಅವರನ್ನು ಸೋಲಿಸಿದ ನಂತರ ಈಶಾನ್ಯ ದೆಹಲಿ ಕ್ಷೇತ್ರದಿಂದ ಬಿಜೆಪಿಯ ಎರಡು ಬಾರಿ ಸಂಸದರಾಗಿದ್ದಾರೆ.

ಪಕ್ಷದ ಹಿರಿಯ ನಾಯಕ ಜೈ ಪ್ರಕಾಶ್ ಅಗರ್ವಾಲ್ ಅನ್ನು ಚಾಂದಿನಿ ಚೌಕದಿಂದ ಕಾಂಗ್ರೆಸ್ ಕಣಕ್ಕಿಳಿಸಿದೆ. ಅಗರ್ವಾಲ್ ಅವರು ಎರಡು ಬಾರಿಯ ಸಂಸದ ಮತ್ತು ಮಾಜಿ ಕೇಂದ್ರ ಆರೋಗ್ಯ ಸಚಿವ ಹರ್ಷವರ್ಧನ್ ಬದಲಿಗೆ ಬಿಜೆಪಿ ಟಿಕೆಟ್‌ನಲ್ಲಿ ಸ್ಪರ್ಧಿಸುತ್ತಿರುವ ಅಖಿಲ ಭಾರತ ವ್ಯಾಪಾರಿಗಳ ಒಕ್ಕೂಟದ (ಸಿಎಐಟಿ) ಕಾರ್ಯದರ್ಶಿ ಪ್ರವೀಣ್ ಖಂಡೇಲ್‌ವಾಲ್ ಅವರನ್ನು ಎದುರಿಸಲಿದ್ದಾರೆ.

### ಬೃಹತ್ ಮತದಾನ ಜಾಗೃತಿ ಜಾಥಾ ಕಾರ್ಯಕ್ರಮದಲ್ಲಿ ಎಸ್.ಕೆ. ಇನಾಮದಾರ

# ಮತದಾನ ಹಬ್ಬದಲ್ಲಿ ಭಾಗಿಯಾಗಿ

**■ವಿಜಯಸಾಕ್ಷಿ ಸುದ್ದಿ, ರೋಣ**

ಎಲ್ಲಾ ಮತದಾರರು ತಮ್ಮ ಮತಗಟ್ಟೆಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿ, ಮೇ 7ರಂದು ನಡೆಯುವ ಮತದಾನದ ದಿನ ತಪ್ಪದೇ ನಿಮ್ಮ ಹಕ್ಕು ಚಲಾಯಿಸಿ. ಅಲ್ಲದೇ ಚುನಾವಣಾ ಅಕ್ರಮಗಳಿಗೆ ಸಂಬಂಧಿಸಿದ ದೂರುಗಳನ್ನು ನೀಡಬೇಕು, ಸುಲಲಿತ ಹಾಗೂ ನ್ಯಾಯಬದ್ಧ ಚುನಾವಣೆಗಾಗಿ ಚುನಾವಣಾ ಆಯೋಗ ನೀಡಿರುವ ವೋಟರ್ ಹೆಲ್ಪ್ ಲೈನ್, ಸಕ್ಷಾಮ್ ಆ್ಯಪ್, ಸಿವಿಜಿಲ್ ಆ್ಯಪ್‌ಗಳನ್ನು ಬಳಸಿ ನೈತಿಕ ಮತದಾನಕ್ಕೆ ಸಹಕರಿಸಬೇಕು ಎಂದು ತಾಲೂಕಾ ಸ್ವೀಪ್ ಸಮಿತಿ ಅಧ್ಯಕ್ಷರು ಹಾಗೂ ಕಾರ್ಯ ನಿರ್ವಾಹಕ ಅಧಿಕಾರಿ ಎಸ್.ಕೆ. ಇನಾಮದಾರ ಕರೆ ನೀಡಿದರು.

ಲೋಕಸಭಾ ಚುನಾವಣೆ 2024ರ ಅಂಗವಾಗಿ ಸೋಮವಾರ ರೋಣ ಪಟ್ಟಣದ ಸಿದ್ಧಾರೂಢ ಮಠದಿಂದ ತಾಲೂಕಾ ಆಸ್ಪತ್ರೆಯವರೆಗೆ ಹಮ್ಮಿಕೊಂಡಿದ್ದ ಬೃಹತ್ ಮತದಾನ ಜಾಗೃತಿ ಜಾಥಾ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.



ಮೇ 7ರಂದು ಲೋಕಸಭಾ ಸಾರ್ವತ್ರಿಕ ಚುನಾವಣೆಯಲ್ಲಿ ಎಲ್ಲರೂ ಕಡ್ಡಾಯವಾಗಿ ಮತದಾನ ಮಾಡಬೇಕು. ಧರ್ಮ, ಜನಾಂಗ, ಜಾತಿ, ಮತ, ಭಾಷೆ ಅಥವಾ ಯಾವುದೇ ಪ್ರೇರೇಪಣೆ-ದಾಕ್ಷಿಣ್ಯಗಳಿಗೆ ಪ್ರಭಾವಿತರಾಗದೆ ವಿವೇಚನೆಯಿಂದ ಮತ ಚಲಾಯಿಸಿ. ಆ ಮುಖಾಂತರ ಪ್ರಜಾಪ್ರಭುತ್ವವನ್ನು ಗೆಲ್ಲಿಸೋಣ. ಪ್ರಜಾಪ್ರಭುತ್ವ ಗಟ್ಟಿಗೊಳಿಸಲು ಕಡ್ಡಾಯವಾಗಿ ಮತದಾನ ಮಾಡಿ ಎಂದರು.

ಸೂಡಿ ಕ್ರಾಸ್‌ನಲ್ಲಿ ಮಾನವ ಸರಪಳಿ ನಿರ್ಮಿಸಿ ಮತದಾನದ ಜಾಗೃತಿ ಘೋಷಣೆಗಳನ್ನು ಕೂಗುತ್ತಾ ಪೋತರಾಜನ ಕಟ್ಟೆ ಮೂಲಕ ತಾಲೂಕಾ ಆಸ್ಪತ್ರೆಯವರೆಗೂ ಜಾಗೃತಿ ಜಾಥಾ ತಲುಪಿತು. ಈ ಸಂದರ್ಭದಲ್ಲಿ ಆಶಾ ಕಾರ್ಯಕರ್ತರು, ರೋಣ ತಾಲೂಕಿನ 11 ಪ್ರಾಥಮಿಕ ಅರೋಗ್ಯ ಕೇಂದ್ರದ ಸಿಬ್ಬಂದಿಗಳು, ತಾಲೂಕಾ ಪಂಚಾಯತ ಸಿಬ್ಬಂದಿಗಳು ಭಾಗವಹಿಸಿದ್ದರು.

> 80 ವರ್ಷ ಮೇಲ್ಪಟ್ಟ ಹಿರಿಯ ನಾಗರಿಕರಿಗೆ ಹಾಗೂ ವಿಶೇಷ ಚೇತನರಿಗೆ ಮನೆಯಿಂದಲೇ ಮತದಾನ ಮಾಡಲು ಅವಕಾಶ ಕಲ್ಪಿಸಲಾಗಿದೆ. ಮತದಾನದ ಪ್ರಮಾಣವನ್ನು ಹೆಚ್ಚಿಸಲು ಮತದಾನ ಜಾಗೃತಿ ಜಾಥಾದಂತಹ ಅನೇಕ ಕಾರ್ಯಕ್ರಮಗಳನ್ನು ಸ್ವೀಪ್ ಸಮಿತಿಯಿಂದ ಹಮ್ಮಿಕೊಳ್ಳಲಾಗುತ್ತಿದೆ. ಎಲ್ಲರೂ ಕಡ್ಡಾಯವಾಗಿ ನಿರ್ಭೀತಿಯಿಂದ ಮತ ಚಲಾಯಿಸಿ ಎಂದು ಎಸ್.ಕೆ. ಇನಾಮದಾರ ತಿಳಿಸಿದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka